# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 50 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 28–08–2023 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 | Issue - 50 | Title- Code: KARKAN 28269 | Chitradurga | Date: 28-08-2023 Monday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಟ್ವಿಟರ್‌ಗೆ ಸಿಎಂ ಸ್ಪಂದನೆ: ಕೇವಲ 24 ಗಂಟೆಯಲ್ಲಿ ವಿದ್ಯುತ್ ಸಂಪರ್ಕ 2

ಸಾಮಾಜಿಕ ಕಳಕಳಿ ಇದ್ದಾಗ ಮಾತ್ರ ಸಂಸ್ಥೆ ಬೆಳೆಯಲು ಸಾಧ್ಯ: ಸಾಣೇಹಳ್ಳಿ ಶ್ರೀ 3

ಜಿಲ್ಲಾ ಆಸ್ಪತ್ರೆಯ ಜಾಗದಲ್ಲಿ ನೂತನ ವೈದ್ಯಕೀಯ ಕಾಲೇಜು ಸಂಕೀರ್ಣ 4


## ನಿಮ್ಮ ಧ್ವನಿಯಾಗಿ ಕೆಲಸ ಮಾಡುವೆ: ರಘುಮೂರ್ತಿ

» **ಚಳ್ಳಕೆರೆ**

ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಯಾದವ ಸಮುದಾಯಕ್ಕೆ ಕಳೆದ ಸುಮಾರು 10 ವರ್ಷಗಳಿಂದ ಸಾಧ್ಯವಾದಷ್ಟು ಸೌಲಭ್ಯ ನೀಡುವ ಪ್ರಾಮಾಣಿಕ ಪ್ರಯತ್ನ ಮಾಡಿದ್ದೇನೆ. ಇಲ್ಲಿವರೆಗೂ ಸುಮಾರು 120 ಲಕ್ಷ ಹಣವನ್ನು ಈ ಸಮುದಾಯಕ್ಕೆ ವೆಚ್ಚ ಮಾಡಿದ್ದೇನೆ. ಸತ್ಯ, ಪ್ರಾಮಾಣಿಕತೆ ಮತ್ತು ನಂಬಿಕೆಯ ತಳಹದಿಯ ಮೇಲೆ ಈ ಸಮುದಾಯ ಬದುಕು ಹಂಚಿಕೊಂಡಿದ್ದು, ಮುಂದಿನ ದಿನಗಳಲ್ಲೂ ಸಹ ಸಮುದಾಯದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುವ ಭರವಸೆಯನ್ನು ಶಾಸಕ ಟಿ.ರಘುಮೂರ್ತಿ ನೀಡಿದರು.

ನಗರದ ಗೊಲ್ಲರ ಹಾಸ್ಟೆಲ್ ಆವರಣದಲ್ಲಿ ತಾಲ್ಲೂಕು ಯಾದವ ಸಮುದಾಯ ನೀಡಿದ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದರು. ಯಾದವ ಸಮುದಾಯ ಹಲವಾರು ಬೇಡಿಕೆಗಳನ್ನು ಸಲ್ಲಿಸಿದೆ. ಈ ಹಿಂದೆಯೇ ಈ ಬೇಡಿಕೆಗಳ ಬಗ್ಗೆ ಸರ್ಕಾರ ಹಾಗೂ ಮುಖ್ಯಮಂತ್ರಿಗಳೊಂದಿಗೆ ಚರ್ಚೆ ನಡೆಸಿರುವೆ. ಪರಶುರಾಮಪುರ ಹೋಬಳಿಯ ಪರ್ಲಹಳ್ಳಿಯ ವಸಲು ದಿನ್ನೆ ಹಾಗೂ ಚಳ್ಳಕೆರೆಯ ಪಾವಗಡ ರಸ್ತೆಯಲ್ಲಿ ಇರುವ ಎರಡು ಎಕರೆ ಪ್ರದೇಶವನ್ನು ನೀಡುವಂತೆ ಸಮುದಾಯ ಒತ್ತಾಯ ಪಡಿಸುತ್ತಿದೆ. ಈ ಬಗ್ಗೆ ಮತ್ತೊಮ್ಮೆ ನಿಮ್ಮೆಲ್ಲರ ಪರವಾಗಿ ಸರ್ಕಾರದೊಂದಿಗೆ ಚರ್ಚಿಸಿ ನಿಮ್ಮ ಬೇಡಿಕೆಯನ್ನು ಈಡೇರಿಸುವ ಇಂಗಿತ ವ್ಯಕ್ತಪಡಿಸಿದರು.



ಮೂರನೇ ಭಾರಿಗೆ ಅಭೂತಪೂರ್ವ ಗೆಲುವು ಸಾಧಿಸಲು ನನಗೆ ಕ್ಷೇತ್ರದ ಯಾದವ ಸಮುದಾಯ ಭಾರಿ ಪ್ರಮಾಣದಲ್ಲಿ ಮತ ನೀಡಿದೆ. ನಿಮ್ಮ ಸಮುದಾಯದ ಋಣ ನನ್ನ ಮೇಲೆ ಸದಾ ಇದೆ. ನಿಮ್ಮ ಬೇಡಿಕೆಗಳ ಈಡೇರಿಕೆಗೆ ಮೊದಲ ಆದ್ಯತೆ ನೀಡುವೆ. ಪ್ರಸ್ತುತ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸರ್ಕಾರ ವಿಶೇಷವಾಗಿ ಎಲ್ಲಾ ರಂಗಕ್ಕೂ ಆದ್ಯತೆ ನೀಡುತ್ತಿದೆ. ಯಾದವ ಸಮುದಾಯ ಮೌಢ್ಯತೆಯನ್ನು ಬದಿಗಿರಿಸಿ ಸಾಮಾಜಿಕ ನೆಲೆಕಟ್ಟಿನಲ್ಲಿ ಬದುಕು ರೂಪಿಸಿಕೊಳ್ಳುವಂತೆ ಮನವಿ ಮಾಡಿದರು.

ತಾಲ್ಲೂಕು ಗೊಲ್ಲರ ಸಂಘದ ಅಧ್ಯಕ್ಷ ಟಿ.ರವಿಕುಮಾರ್ ಮಾತನಾಡಿ, ಶಾಸಕರ ಮೇಲೆ ನಮ್ಮ ಸಮುದಾಯಕ್ಕೆ ಅಪಾರವಾದ ಗೌರವ, ವಿಶ್ವಾಸವಿದೆ. ಕಳೆದ ಹಲವಾರು ದಶಕಗಳಿಂದ ಸಮಸ್ತಯಾದವಸಮುದಾಯದಸಮಸ್ಯೆಗಳಿಗೆ ಕ್ರಿಯಾಶೀಲವಾಗಿ ಸ್ಪಂದಿಸಿದ ಏಕೈಕ ವ್ಯಕ್ತಿ ಶಾಸಕ ರಘುಮೂರ್ತಿ ಎಂದರೆ ತಪ್ಪಾಗದು. ನಮ್ಮ ಬೇಡಿಕೆಗಳ ಬಗ್ಗೆ ಮತ್ತೊಮ್ಮೆ ಗಮನ ಸೆಳೆದಿದ್ದೇನೆ. ನನಗೆ ವಿಶ್ವಾಸವಿದೆ ಶಾಸಕರು ಮುಂದಿನ ದಿನಗಳಲ್ಲಿ ನಮ್ಮ ಸಮುದಾಯದ ಹಿತಕ್ಕಾಗಿ ನಮ್ಮ ಬೇಡಿಕೆಗಳನ್ನು ನೂರಕ್ಕೆ ನೂರಷ್ಟು ಈಡೇರಿಸುವರು ಎಂದರು.



ಪ್ರಾಸ್ತಾವಿಕವಾಗಿ ಮಾತನಾಡಿದ ನಿವೃತ್ತ ಪ್ರಾಂಶುಪಾಲ ಎಂ.ಕರಿಯಪ್ಪ, ಯಾದವ ಸಮುದಾಯ ಅಭಿವೃದ್ಧಿ ಹೊಂದಲು ಮೀಸಲಾತಿಯ ಅವಶ್ಯಕತೆ ಇದೆ. ಇತ್ತೀಚೆಗೆ ಕಾಡುಗೊಲ್ಲ ಸಮುದಾಯಕ್ಕೆ ಜಾತಿ ಪ್ರಮಾಣ ನೀಡಲು ಸರ್ಕಾರ ಹಿಂದೇಟು ಹಾಕುತ್ತಿದೆ. ರಾಜಕೀಯವಾಗಿ ಯಾವ ಸಮುದಾಯಕ್ಕೆ ನಿರೀಕ್ಷಿತ ಮಟ್ಟದಲ್ಲಿ ಯಾವುದೇ ಪ್ರಾಧಾನ್ಯತೆ ಸಿಕ್ಕಿಲ್ಲ, ಇಡೀ ರಾಜ್ಯದಲ್ಲಿ ನಮ್ಮ ಸಮುದಾಯವನ್ನು ಪ್ರತಿನಿಧಿಸುವ ಶಾಸಕರಿಲ್ಲ. ಕಡೆಯ ಪಕ್ಷ ಸರ್ಕಾರ ವಿಧಾನ ಪರಿಷತ್ ಸ್ಥಾನವನ್ನಾದರೂ ಸಮುದಾಯಕ್ಕೆ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ನಿವೃತ್ತ ಪ್ರಾಂಶುಪಾಲ ಬಿ.ವಿ.ಸಿರಿಯಣ್ಣ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಟಿ.ಶಶಿಧರ, ಕಾಡುಗೊಲ್ಲ ಸಂಘದ ಅಧ್ಯಕ್ಷ ಬೂದಿಹಳ್ಳಿ ರಾಜಣ್ಣ, ಮಹಿಳಾ ಘಟಕದ ಅಧ್ಯಕ್ಷೆ ಚಿತ್ರಾವತಿ, ಸಿ.ಮಲ್ಲಿಕಾರ್ಜುನ್, ಕೆ.ಎ.ಮೂರ್ತಪ್ಪ, ಹನುಮಂತಪ್ಪ, ಕೆಂಜಡಿಯಪ್ಪ, ರೆಡ್ಡಿಹಳ್ಳಿ ಶಿವಣ್ಣ, ಶಾಂತಮ್ಮ, ಹುಲಿಕುಂಟೆ ಕಾಂತರಾಜು, ಎಚ್.ಮಹಲಿಂಗಪ್ಪ, ವಿ.ವೀರೇಶ್, ಸಿದ್ದಾಪುರ ಮಂಜಣ್ಣ ಮುಂತಾದವರು ಉಪಸ್ಥಿತರಿದ್ದರು.

## ನುಡಿದಂತೆ ನಡೆದ ಸರ್ಕಾರಕ್ಕೆ ಶತಕದ ಸಂಭ್ರಮ

» **ಬೆಂಗಳೂರು**

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಬದ್ಧತೆಯ ಜತೆ ಜತೆಗೆ ಇಂದಿಗೆ 100 ದಿನಗಳನ್ನು ಪೂರೈಸಿದೆ. ಕಳೆದ ಮೇ ತಿಂಗಳ 20 ರಂದು ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಉಪಮುಖ್ಯಮಂತ್ರಿಯಾಗಿ ಡಿ.ಕೆ ಶಿವಕುಮಾರ್ ಅವರು ಪ್ರಮಾಣವಚನ ಸ್ವೀಕರಿಸುವ ಮೂಲಕ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿದ್ದು, ಇಂದಿಗೆ 100 ದಿನ ತುಂಬಿದೆ.ಕಾಂಗ್ರೆಸ್ ಸರ್ಕಾರದ 100 ದಿನದ ಅವಧಿಯಲ್ಲಿ ಚುನಾವಣಾ ಪೂರ್ವದಲ್ಲಿ ನೀಡಿದ್ದ ಪಂಚಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಒತ್ತು ನೀಡಲಾಗಿದ್ದು, ಈಗಾಗಲೇ ಶಕ್ತಿ, ಗೃಹಜ್ಯೋತಿ, ಅನ್ನಭಾಗ್ಯ, ಯೋಜನೆಗಳು ಜಾರಿಯಾಗಿದ್ದು, ಇದೇ ತಿಂಗಳ 30 ರಂದು ಗೃಹಲಕ್ಷ್ಮಿ ಯೋಜನೆ ಜಾರಿಯಾಗುತ್ತಿದೆ. ಬರುವ ಡಿಸೆಂಬರ್ ಹೊತ್ತಿಗೆ ಯುವನಿಧಿ ಯೋಜನೆಯನ್ನು ಜಾರಿ ಮಾಡುವ ಬದ್ಧತೆಯನ್ನು ಸರ್ಕಾರ ತೋರಿದೆ.ಪಂಚ ಗ್ಯಾರಂಟಿ ಯೋಜನೆಗಳಿಗೆ ಹಣಕಾಸು ಒದಗಿಸುವ ಸವಾಲಿನ ಜತೆಗೆ ಅಭಿವೃದ್ಧಿ ಕಾರ್ಯಗಳಿಗೂ ಆದ್ಯತೆ ನೀಡುವ ಸವಾಲು ಸರ್ಕಾರದ ಮುಂದಿದ್ದು, 100 ದಿನಗಳಲ್ಲಿ ಗ್ಯಾರಂಟಿ ಯೋಜನೆಗಳಿಗೆ ಅಗತ್ಯ ಹಣಕಾಸನ್ನು ಹೊಂದಿಸಿಕೊಳ್ಳುವತ್ತ ಸರ್ಕಾರ ಚಿತ್ತ ಹರಿಸಿ ಸಂಪನ್ಮೂಲ ಸಂಗ್ರಹಣೆಗೆ ಒತ್ತು ನೀಡಿದೆ.




ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ನಂತರ ಜನಕೇಂದ್ರಿತ ಆರ್ಥಿಕ ನೀತಿ ಬಜೆಟ್‌ನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿ, ಬಜೆಟ್‌ನಲ್ಲಿ ಗ್ಯಾರಂಟಿ ಯೋಜನೆಗಳಿಗೆ ಹಣವನ್ನು ಒದಗಿಸಿ ಹತ್ತು ಹಲವು ಅಭಿವೃದ್ಧಿ ಕಾರ್ಯಗಳಿಗೂ ಹಣಕಾಸನ್ನು ಒದಗಿಸುವ ಘೋಷಣೆ ಮಾಡಿದ್ದಾರೆ.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣವೇ ಗ್ಯಾರಂಟಿ ಯೋಜನೆಯ ಅನುಷ್ಠಾನದ ಸವಾಲು ಎದುರಾಗಿತ್ತು, ಈ ಸವಾಲನ್ನು ಸಮರ್ಥವಾಗಿ ನಿಭಾಯಿಸಿ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡುವ ಕಾರ್ಯವನ್ನು ಸರ್ಕಾರ ಮಾಡಿದೆ. ಪ್ರತಿಪಕ್ಷಗಳ ಟೀಕೆಗಳ ನಡುವೆಯೇ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡುವ ಕಾರ್ಯವನ್ನು ಸರ್ಕಾರ ನಡೆಸಿದೆ.ಗ್ಯಾರಂಟಿ ಯೋಜನೆಗಳಿಗೆ ಹೆಚ್ಚಿನ ಹಣ ವ್ಯಯವಾಗುತ್ತಿರುವುದರಿಂದ ಅಭಿವೃದ್ಧಿ ಯೋಜನೆಗೆ ಹಣ ಒದಗಿಸುವ ಸವಾಲು ಸರ್ಕಾರದ ಮುಂದಿದೆ. ಮಳೆಯ ಕೊರತೆಯಿಂದ ರಾಜ್ಯದ 130 ತಾಲ್ಲೂಕುಗಳಲ್ಲಿ ಬರದ ಛಾಯೆ ಕಾಣಿಸಿಕೊಂಡಿದೆ. ಹಾಗಾಗಿ ಬರ ಪರಿಹಾರ ಕಾರ್ಯಗಳಿಗೂ ಹಣ ಒದಗಿಸುವ ಸವಾಲು ಇದ್ದು, ಬರ ಪರಿಸ್ಥಿತಿಯನ್ನು ಸಮರ್ಪಕವಾಗಿಎದುರಿಸಲುಸರ್ಕಾರಅಗತ್ಯ ಸಂಪನ್ಮೂಲವನ್ನು ಕ್ರೂಢೀಕರಿಸಿಕೊಳ್ಳುವ ಅಗತ್ಯತೆ ಹೆಚ್ಚಿದೆ.

100 ದಿನಗಳಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಮೂಲಕ ನುಡಿದಂತೆ ನಡೆದಿದ್ದೇವೆ ಎಂಬ ಹೆಮ್ಮೆ ಕಾಂಗ್ರೆಸ್ ಸರ್ಕಾರಕ್ಕೆ ಇದೆಯಾದರೂ ಮುಂದಿನ ದಿನಗಳಲ್ಲಿ ಸವಾಲುಗಳು ಸಾಕಷ್ಟಿದೆ. ಅದರಲ್ಲೂ ಬರಪರಿಸ್ಥಿತಿ ನಿಭಾಯಿಸುವುದು ಸರ್ಕಾರದ ಸವಾಲು ಆಗಲಿದೆ. ಬರಪರಿಸ್ಥಿತಿಯ ನಡುವೆಯೇ ಸಂಪನ್ಮೂಲ ಕ್ರೂಢೀಕರಿಸಿಕೊಂಡು ಆದಾಯ ಹೆಚ್ಚಿಸಿಕೊಂಡು ವಿವಿಧ ಯೋಜನೆಗಳಿಗೆ ಬೊಕ್ಕಸದಿಂದ ಹಣನೀಡುವ ಅಗತ್ಯತೆ ಹೆಚ್ಚಿದೆ.

ಪುಟ ↘ 2

## ಮೋದಿ ಪ್ರಚಾರಕ್ಕೆ 5000 ಕೋಟಿ ರೂ. ಖರ್ಚು; ಲಾಡ್

» **ಹುಬ್ಬಳ್ಳಿ**

ಪ್ರಧಾನಿ ನರೇಂದ್ರ ಮೋದಿಯವರು ಪ್ರಚಾರಕ್ಕೆ 5000 ಕೋಟಿ ರೂ. ಖರ್ಚು ಮಾಡುತ್ತಾರೆ. ಬಿಜೆಪಿಯ ಎಲ್ಲ ಹಗರಣಗಳನ್ನು ತನಿಖೆ ಮಾಡುತ್ತೇವೆ. 100 ಪರ್ಸೆಂಟ್ ತನಿಖೆ ಮಾಡುತ್ತೇವೆ. ಮಾಜಿ ಪ್ರಧಾನಿ ಜವಾಹರ್ ಲಾಲ್ ನೆಹರು ಕಾಲದಲ್ಲಿ ಈ ದೇಶದ ಬಜೆಟ್ ಎಷ್ಟಿತ್ತು. ಇವತ್ತು ಇವರು ನೆಹರುಗೆ ಬೈತಾರೆ. ನಮ್ಮ ದೇಶ ಫುಟ್ ಪಾತ್ ಮೇಲೆ ಇತ್ತು. ಚಪ್ಪಲಿ ಹಾಕಲಾಗದ ಕಾಲದಲ್ಲಿ ನೆಹರು ಇಸ್ರೋ ನಿರ್ಮಿಸಿದ್ದಾರೆ ಎಂದು ಸಂತೋಷ್ ಲಾಡ್ ಹೇಳಿದರು.








**ಪ್ರಮುಖ ಸುದ್ದಿ**

## ಹೊರವಲಯದಲ್ಲಿ ಮೆಡಿಕಲ್ ಕಾಲೇಜು ನಿರ್ಮಾಣ ಮಾಡಿ: ಡಾ.ವಿಜಯಕುಮಾರ್

» **ಚಿತ್ರದುರ್ಗ**

ಮುಂದಿನ ಪೀಳಿಗೆಯ ಹಿತದೃಷ್ಟಿಯನ್ನು ಬಯಸಿ ಚಿತ್ರದುರ್ಗ ಹೊರವಲಯದ ವಿಶಾಲವಾದ ಪ್ರದೇಶದಲ್ಲಿ ಸುಸಜ್ಜಿತ ವೈದ್ಯಕೀಯ ಕಾಲೇಜು ನಿರ್ಮಾಣ ಮಾಡಬೇಕು ಎಂದುಭಾರತೀಯ ವೈದ್ಯಕೀಯ ಸಂಘದ ಅಧ್ಯಕ್ಷ ಡಾ.ಪಿ.ಟಿ. ವಿಜಯಕುಮಾರ್ ಒತ್ತಾಯಿಸಿದ್ದಾರೆ.

ನಗರದ ಐಎಂಎ ಸಭಾಂಗಣದಲ್ಲಿ ಭಾನುವಾರ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಮಧ್ಯ ಕರ್ನಾಟಕದ ಚಿತ್ರದುರ್ಗ ಜಿಲ್ಲೆಯ ಜನರ ಬಹುದಿನದ ಕನಸ್ಸಾಗಿರುವ ವೈದ್ಯಕೀಯ ಕಾಲೇಜನ್ನು ಸರ್ಕಾರ ನಿರ್ಮಾಣ ಮಾಡಲು ಹೊರಟಿರುವುದು ನಮಗೆಲ್ಲ ಸಂತೋಷದ ಸಂಗತಿ. ಆದರೆ ಕಾಲೇಜನ್ನು ಈಗೀನ ಜಿಲ್ಲಾ ಆಸ್ಪತ್ರೆ ಪ್ರದೇಶದಲ್ಲಿ ನಿರ್ಮಾಣ ಮಾಡಲು ಹೊರಟಿರುವುದು ದುರಂತದ ಸಂಗತಿಯಾಗಿದೆ.



ಜಿಲ್ಲಾ ಆಸ್ಪತ್ರೆಗೆ ಪ್ರತಿನಿತ್ಯ 6 ತಾಲ್ಲೂಕುಗಳ ಹಳ್ಳಿಗಳಿಂದ ಸಾವಿರಾರು ಜನರು ಚಿಕಿತ್ಸೆಗಾಗಿ ಬಂದು ಹೋಗುತ್ತಿದ್ದು, ಈ ಪ್ರದೇಶದಲ್ಲಿ ಹೆಚ್ಚಿನ ಜನಸಂದಾಣಿಯಾಗಿ ವಾಹನಗಳ ಸಂಚಾರ ಬಹಳಷ್ಟಿರುತ್ತದೆ. ಇದರ ಜೊತೆ ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿಗಳು, ಉಪನ್ಯಾಸಕರು, ಸಿಬ್ಬಂದಿಗಳು ಸೇರದರೆ ಆಸ್ಪತ್ರೆಗೆ ಬರುವ ರೋಗಿಗಳಿಗೆ ಬಹಳಷ್ಟು ತೊಂದರೆ ಆಗಲಿದೆ.

ಪುಟ ↘ 2

## ಫಾಸ್ಟ್ ನ್ಯೂಸ್

### ಹೊರವಲಯದಲ್ಲಿ ಮೆಡಿಕಲ್ ಕಾಲೇಜು ನಿರ್ಮಾಣ ಮಾಡಿ: ಡಾ.ವಿಜಯಕುಮಾರ್

» ಮೊದಲ ಪುಟದಿಂದ

ಅಲ್ಲದೆ ವಾಹನಗಳ ಓಡಾಟವೇ ತೀವ್ರ ಅಸ್ತವ್ಯಸ್ತ ಆಗಲಿದೆ ಆದ್ದರಿಂದ ಆಸ್ಪತ್ರೆಯನ್ನು ಮಾತ್ರ ಇಲ್ಲಿ ನಿರ್ಮಾಣ ಮಾಡಿ ಕಾಲೇಜನ್ನು ನಗರದ ಹೊರವಲಯದಲ್ಲಿ ನಿರ್ಮಾಣ ಮಾಡಬೇಕು ಎಂದು ಹೇಳಿದರು. ಆಸ್ಪತ್ರೆ ಸುತ್ತಮುತ್ತಲು ಈಗಿರುವ ರಕ್ತ ನಿಧಿ ಕೇಂದ್ರ, ಆರ್ ಓ ಪ್ಲಾಂಟ್, ಡಯಾಲಿಸಿಸ್ ಕೇಂದ್ರಗಳು ಇದ್ದು, ಕಾಲೇಜು ನಿರ್ಮಾಣ ಮಾಡಬೇಕಾದರೆ ಈಗಿರುವ ಸುಸಜ್ಜಿತ ಕಟ್ಟಡಗಳನ್ನು ಧ್ವಂಸ ಮಾಡಬೇಕಾಗುತ್ತದೆ. ಇದು ಅನವಶ್ಯಕವಾಗಿ ಸರ್ಕಾರದ ಬೊಕ್ಕಸಕ್ಕೆ ನಷ್ಟ ಆಗಲಿದೆ ಎಂದು ಜನರ ತೆರಿಗೆಯ ಹಣವನ್ನು ಏಕೆ ಆಳು ಮಾಡಬೇಕು. ಅಲ್ಲದೆ ನಮ್ಮ ಮುಂದಿನ ಪೀಳಿಗೆಯ ಹಿತದೃಷ್ಟಿಯಿಂದ ನಗರದ ಹೊರವಲಯದಲ್ಲಿ ಕಾಲೇಜು ನಿರ್ಮಾಣ ಮಾಡಿದರೆ ವಿದ್ಯಾರ್ಥಿಗಳಿಗೆ ಉತ್ತಮ ವಾತಾವರಣ ಸಿಗಲಿದೆ, ಆಟದ ಮೈದಾನ ಮಾಡಿದರೆ ಕಲಿಕೆಯ ಜೊತೆ ವಿದ್ಯಾರ್ಥಿಗಳು ದೈಹಿಕವಾಗಿ ಸದೃಡರಾಗಿರಲು ಅನುಕೂಲ ಆಗಲಿದೆ ಎಂದರು.ಇಲ್ಲಿನ ಜಿಲ್ಲಾ ಆಸ್ಪತ್ರೆ ಸ್ಥಳವು ಸದ್ಯ ನ್ಯಾಯಾಲಯದಲ್ಲಿರುವುದರಿಂದ ಇಲ್ಲಿ ಕಾಲೇಜು ನಿರ್ಮಾಣ ಸರಿ ಇರುವುದಿಲ್ಲ ಎಂದು ಹೇಳಿದ ಅವರು ಒಂದು ವೇಳೆ ಇಲ್ಲಿಯೇ ಕಾಲೇಜು ನಿರ್ಮಾಣ ಮಾಡಿದರೆ ನಾವು ಇದರ ವಿರುದ್ಧ ನ್ಯಾಯಾಲಯದ ಮೆಟ್ಟಿಲು ಏರುವುದಾಗಿ ಎಚ್ಚರಿಸಿದ್ದಾರೆ.ಆಸ್ಪತ್ರೆಯ ಕಟ್ಟಡವನ್ನು ಮಾತ್ರ ಇಲ್ಲಿ ನಿರ್ಮಾಣ ಮಾಡಿ, ಹೊರವಲಯದಲ್ಲಿ ಕಾಲೇಜು ನಿರ್ಮಾಣ ಮಾಡಿದರೆ ನಗರದ ಬೆಳವಣಿಗೆಗೆ ಅನುಕೂಲ ಆಗಲಿದೆ ಎಂದು ಮನವಿ ಮಾಡಿದರು. ಪತ್ರಿಕಾಗೋಷ್ಠಿಯಲ್ಲಿ ಭಾರತೀಯ ವೈದ್ಯಕೀಯ ಸಂಘದ ಕಾರ್ಯದರ್ಶಿ ಡಾ.ಬಸವರಾಜ್ ಕೆ.ಎಂ. ಹಾಜರಿದ್ದರು.

### ನುಡಿದಂತೆ ನಡೆದ ಸರ್ಕಾರಕ್ಕೆ ಶತಕದ ಸಂಭ್ರಮ




» ಮೊದಲ ಪುಟದಿಂದ

ಶಾಸಕರುಗಳ ಅನುದಾನ ಬೇಡಿಕೆ ಸವಾಲನ್ನು ನಿಭಾಯಿಸುವುದು ಸರ್ಕಾರದ ಮುಂದಿರುವ ದೊಡ್ಡ ಸವಾಲಾಗಿದೆ, ಹಾಗೆಯೇ ನಿಗಮ ಮಂಡಳಿಗಳ ನೇಮಕ ಒತ್ತಡವೂ ಸರ್ಕಾರದ ಮೇಲಿದ್ದು, ಇದೆಲ್ಲದರ ನಡುವೆಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ 100 ದಿನ ಪೂರೈಸಿದೆ. ಸರ್ಕಾರ ಅಧಿಕಾರಕ್ಕೆ ಬಂದ ಆರಂಭದಲ್ಲೇ ವರ್ಗಾವಣೆ ದಂಧೆ ನಡೆಯುತ್ತಿದೆ ಎಂಬ ಆರೋಪಕ್ಕೆ ಸರ್ಕಾರ ಒಳಗಾಗಿತ್ತು. ಜತೆಗೆ ಗುತ್ತಿಗೆದಾರರಿಂದ ಕಮಿಷನ್ ಕೇಳಲಾಗಿದೆ ಎಂಬ ಆರೋಪಗಳು ವಿಪಕ್ಷಗಳು ಮಾಡಿದ್ದವು ಹಾಗೆಯೇ ಕೃಷಿ ಸಚಿವ ಚೆಲುವರಾಯಸ್ವಾಮಿ ಅವರ ವಿರುದ್ಧ ಭ್ರಷ್ಟಾಚಾರದ ಆರೋಪಗಳನ್ನು ಮಾಡಲಾಗಿತ್ತು, ಇವೆಲ್ಲದರ ನಡುವೆಯೇ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡುವ ಮೂಲಕ ಜನರ ಮನಗೆಲ್ಲುವ ಪ್ರಯತ್ನಗಳಲ್ಲಿ ಸ್ವಲ್ಪಮಟ್ಟಿಗೆ ಯಶಸ್ವಿಯಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಮುಂದೆ ಮುಂದಿನ ದಿನಗಳಲ್ಲಿ ಉತ್ತಮ ಆಡಳಿತ ನೀಡುವ ಹಾಗೂ ರಾಜ್ಯವನ್ನು ಅಭಿವೃದ್ಧಿಯ ಪಥದಲ್ಲಿ ಮುನ್ನಡೆಸಿ ಸರ್ವಾಂಗೀಣ ಅಭಿವೃದ್ಧಿಯನ್ನು ಸಾಧಿಸುವ ಸವಾಲು ಸರ್ಕಾರದ ಮುಂದಿದೆ.


**ನಿರೀಕ್ಷೆ ಈಡೇರಿಸಲು ಪ್ರಯತ್ನ:** ರಾಜ್ಯದಲ್ಲಿ ನನ್ನ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಇಂದಿಗೆ100ದಿನಗಳುಪೂರೈಸಿದೆ.ಕಳೆದವಿಧಾನಸಭಾ ಚುನಾವಣೆಯಲ್ಲಿ ನಾಡಿನ ಮತದಾರರು ನಮ್ಮ ಮೇಲೆ ನಂಬಿಕೆ ಮತ್ತು ಭರವಸೆಯನ್ನಿಟ್ಟು 135 ಸ್ಥಾನಗಳಲ್ಲಿ ನಮ್ಮ ಅಭ್ಯರ್ಥಿಗಳನ್ನು ಗೆಲ್ಲಿಸಿ ಪೂರ್ಣಬಹುಮತದ ಸುಭದ್ರ ಸರ್ಕಾರ ರಚನೆಗೆ ಅವಕಾಶ ಮಾಡಿಕೊಟ್ಟಿದ್ದಾರೆ. ಜನರು ನೀಡಿರುವ ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಅವರ ನಿರೀಕ್ಷೆಗಳನ್ನು ಈಡೇರಿಸುವ ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಕಾಂಗ್ರೆಸ್ ಸರ್ಕಾರಕ್ಕೆ 100 ದಿನ ತುಂಬಿದ ಪೂರೈಸಿದ ಸಂತಸವನ್ನು ಫೇಸ್‌ಬುಕ್‌ನಲ್ಲಿ ಹಂಚಿಕೊಂಡಿರುವ ಅವರು, ಗ್ಯಾರಂಟಿ ಮತ್ತು ಅಭಿವೃದ್ಧಿ ಯೋಜನೆಗಳ ಅನುಷ್ಠಾನದ ಜತೆ ಜತೆಗೆ ಬುದ್ಧ, ಬಸವ, ಅಂಬೇಡ್ಕರ್, ಕುವೆಂಪು, ಕನಕದಾಸರು, ನಾರಾಯಣಗುರು ಮುಂತಾದ ದಾರ್ಶನಿಕರು ತೋರಿದ ಹಾದಿಯಲ್ಲಿ ನಾಡನ್ನು ಮುನ್ನಡೆಸಿಕೊಂಡು ಹೋಗುತ್ತಿದ್ದೇವೆ. ಸಮಾಜದ ಕಟ್ಟಕಡೆಯವ್ಯಕ್ತಿಯನ್ನುಸರ್ಕಾರದಕಾರ್ಯಕ್ರಮಗಳ ಮೂಲಕ ತಲುಪಬೇಕೆಂಬ ಆಶಯದೊಂದಿಗೆ ಆರಂಭಿಸಿರುವ ನಮ್ಮ ಪಯಣಕ್ಕಿಂದು ಶತಕ ಸಂಭ್ರಮ. ಈ ವಿಶೇಷ ಸಂದರ್ಭದಲ್ಲಿ ನಮ್ಮೊಂದಿಗೆ ಕೈ ಜೋಡಿಸಿ ಬೆಂಬಲವಾಗಿ ನಿಂತಿರುವ ನಾಡಿನ ಪ್ರತಿಯೊಬ್ಬರಿಗೂ ಧನ್ಯವಾದಗಳು, ನಿಮ್ಮೆಲ್ಲರ ಸಹಕಾರ ನಿರಂತರವಾಗಿರಲಿ ಎಂದು ಫೇಸ್‌ಬುಕ್‌ನಲ್ಲಿ ಬರೆದುಕೊಂಡಿದ್ದಾರೆ.

# ಗೃಹ ಸಾಲದ ಪ್ರಮಾಣ ಹೆಚ್ಚಳ: ಜಯ್ಯಣ್ಣ

» ಚಿತ್ರದುರ್ಗ

ಸದಸ್ಯರ ಅನುಕೂಲಕ್ಕಾಗಿ ಗೃಹ ಸಾಲದ ಪ್ರಮಾಣವನ್ನು ಹೆಚ್ಚಳ ಮಾಡಲಾಗಿದೆ. ಇದರೊಂದಿಗೆ ಬಂಗಾರದ ಮೇಲಿನ ಸಾಲವನ್ನು ಸಹಾ ಹೆಚ್ಚಿಗೆ ಮಾಡಲಾಗಿದೆ ಎಂದು ಚಿತ್ರದುರ್ಗ ಟೌನ್ ಕೋ–ಆಪರೇಟಿವ್ ಸೊಸೈಟಿ ಲಿ.ನ ಅಧ್ಯಕ್ಷರಾದ ನಿಶಾನಿ ಜಯ್ಯಣ್ಣ ತಿಳಿಸಿದರು.




ಚಿತ್ರದುರ್ಗ ನಗರದ ಶ್ರೀಮತಿ ಕಾಟಮ್ಮ ವೀರನಾಗಪ್ಪ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದ್ದ ಚಿತ್ರದುರ್ಗ ಟೌನ್ ಕೋ–ಆಪರೇಟಿವ್ ಸೊಸೈಟಿ ಲಿ.ನ 106ನೇ ಸರ್ವ ಸದಸ್ಯರ ಸಾಮಾನ್ಯ ವಾರ್ಷಿಕ ಮಹಾ ಸಭೆಯನ್ನು ಉದ್ಘಾಟಿಸಿ ಮಾತನಾಡಿ, 112 ವರ್ಷ ಇತಿಹಾಸವನ್ನು ಹೊಂದಿರುವ ಸೊಸೈಟಿ ಈ ಹಿಂದೆ ಸಾಲದಲ್ಲಿ ಇತ್ತು ಆದರೆ ಈಗ ಸೊಸೈಟಿಯನ್ನು ಲಾಭದ ಹಾದಿಗೆ ತೆಗೆದುಕೊಂಡುವ ಹೋಗಲಾಗಿದೆ. ಸದಸ್ಯರ ಉಪಯೋಗಕ್ಕಾಗಿ ಲಾಕರ್ ವ್ಯವಸ್ಥೆಯನ್ನು ಮಾಡಲಾಗಿದೆ. ಇದರೊಂದಿಗೆ ಹಣವನ್ನು ದ್ವಿಗುಣಗೊಳಿಸುವ ಕಾರ್ಯವನ್ನು ಸೊಸೈಟಿ ಕಳೆದ ಮೂರು ತಿಂಗಳ ಹಿಂದೆ ಜಾರಿ ಮಾಡಲಾಗಿತ್ತು ಇದರಲ್ಲಿ ಹಲವಾರು ಜನ ಹಣವನ್ನು ತೊಡಗಿಸಿದ್ದಾರೆ ಎಂದರು.

ಸದಸ್ಯರಿಗೆ ಗೃಹ ಸಾಲದ ಪ್ರಮಾಣವನ್ನು 5 ಲಕ್ಷ ದಿಂದ 15 ಲಕ್ಷದವರೆಗೆ ಏರಿಕೆ ಮಾಡಲಾಗಿದೆ, ಇದರೊಂದಿಗೆ ಬಂಗಾರದ ಮೇಲಿನ ಸಾಲವನ್ನು ಸಹಾ 5 ಲಕ್ಷದವರೆಗೆ ಹೆಚ್ಚಳ ಮಾಡಲಾಗಿದೆ. ಇದಲ್ಲದೆ ಕೈ ಸಾಲವನ್ನು 50 ಸಾವಿರದಿಂದ 1 ಲಕ್ಷದವರೆಗೆ ನೀಡಲು ತೀರ್ಮಾನ ಮಾಡಲಾಗಿದೆ ಎಂದು ತಿಳಿಸಿದರು.

ಈ ಹಿಂದೆ ಸೂಸೈಟಿ ಚಿತ್ರದುರ್ಗ ನಗರ ವ್ಯಾಪ್ತಿಯಲ್ಲಿ ಮಾತ್ರ ಇತ್ತು ಇದರ ಸದಸ್ಯರು ನಗರ ವ್ಯಾಪ್ತಿಯನ್ನು ಮೀರಿ ಬೇರೆ ಕಡೆಯಲ್ಲಿ ಇದ್ದಾರೆ ಈ ಹಿನ್ನಲೆಯಲ್ಲಿ ಚಿತ್ರದುರ್ಗ ನಗರಕ್ಕೆ ಹೊಂದಿಕೊಂಡಂತೆ ಇರುವ ಕವಾಡಿಗರ ಹಟ್ಟಿ, ಕೊವೆನ ಹಟ್ಟಿ ಬಸವೇಶ್ವರ ನಗರ, ವಿದ್ಯಾ ನಗರವನ್ನು ಸೇರಿಸುವುದರಿಂದ ನಮ್ಮ ವ್ಯವಹಾರಕ್ಕೂ ಸಹಾ ಅನುಕೂಲವಾಗಲಿದೆ ಈ ಹಿನ್ನಲೆಯಲ್ಲಿ ನಮ್ಮ ಕಾಯ್ದೆಗೆ ತಿದ್ದುಪಡಿಯನ್ನು ತರುವುದರ ಮೂಲಕ ಜಾರಿ ಮಾಡಲಾಗುವುದೆಂದಾಗಿ ಸಭೆ ಸಮ್ಮತಿಸಿತು. ನಮ್ಮ ಸದಸ್ಯರಿಗೆ ವಿಮೆಯನ್ನು ಸಹಾ ಜಾರಿ ಮಾಡಲಾಗುತ್ತಿದೆ ಇದರ ಬಗ್ಗೆ ವಿಮಾ ಕಂಪನಿಯೊಂದರೊಂದಿಗೆ ಮಾತುಕತೆಯನ್ನು ಮಾಡಲಾಗಿದೆ ಸದಸ್ಯರು 60 ರೂ.ಗಳನ್ನು ಕಟ್ಟುವುದರ ಮೂಲಕ ಆಕಸ್ಮಾತ್ ಅಫಘಾತ್ ವಾಗಿ ಮರಣವನ್ನು ಹೊಂದಿದರೆ 1 ಲಕ್ಷ ರೂ ದೊರೆಯಲಿದೆ ಇದರ ಬದಲಿಗೆ ಗಾಯಗಳಾದರೆ 50 ಸಾವಿರ ರೂ.ಗಳು ಸಿಗಲಿದೆ ಎಂದು ನಿಶಾನಿ ಜಯ್ಯಣ್ಣ ತಿಳಿಸಿದರು.


2023ರಲ್ಲಿ 2581 ಜನ ಸದಸ್ಯರನ್ನು ಹೊಂದಿದ್ದು, 44,23,000–00 ರೂ.ಗಳ ಠೇವಣಿಯನ್ನು ಹೊಂದಿದೆ. ಕಳೆದ ಸಾಲಿನಲ್ಲಿ ಸಂಘದಲ್ಲಿ 3,62,62,023–00 ಠೇವಣಿಗಳನ್ನು ಹೊಂದಿದ್ದು, 31.03.2023 ಮಾರ್ಚ್ ಅಂತ್ಯಕ್ಕೆ 4,53,96,690–00 ಠೇವಣಿಯನ್ನು ಹೊಂದಿದೆ. ಇದೇ ದಿನಾಂಕದವರೆಗೂ 38,82,205,000 ರೂಗಳನ್ನು ವಿವಿಧ ಬ್ಯಾಂಕ್ ಗಳಲ್ಲಿ ಮತ್ತು ಸಂಸ್ಥೆಗಳಲ್ಲಿ ತೂಡಗಿಸಲಾಗಿದೆ. ಇದೇ ಸಮಯದಲ್ಲಿ 1,86,60,373–00 ಸಾಲದ ಬಾಕಿ ಇದೆ ಇದರಲ್ಲಿ ಕಳೆದ ಸಾಲಿಗಿಂಥ ಈ ಭಾರಿ 50,20,225–00 ರೂ.ಸಾಲ ವೃದ್ಧಿಯಾಗಿದ್ದು, ಇದರಲ್ಲಿ 12,32,904–00 ಸಾಲ ಸುಸ್ತಿಯಲ್ಲಿದೆ. 2202–23ನೇ ಸಾಲಿನಲ್ಲಿ 11,18,326.04 ರೂ.ಗಳ ಲಾಭ ಬಂದಿದೆ ಇದನ್ನು ತನ್ನ ಸದಸ್ಯರಿಗೆ ಶೇ.13ರಷ್ಟು ಡಿವಿಡೆಂಡ್‌ನ್ನು ವಿತರಣೆ ಮಾಡಲು ತೀರ್ಮಾನಿಸಲಾಯಿತು. ಇದೇ ಸಂದರ್ಭದಲ್ಲಿ 2022–23ನೇ ಸಾಲಿನಲ್ಲಿ 23 ಜನ ಸದಸ್ಯರು ಮರಣವನ್ನು ಹೊಂದಿದ್ದು, ಇವರ ಖಾತೆಗೆ ಅತ್ಯ ಸಂಸ್ಕಾರ ನಿಧಿಯಾಗಿ 25,561,91 ರೂ.ಗಳನ್ನು ನೀಡಲಾಗಿದೆ ಎಂದರು.

ಸೊಸೈಟಿತನ್ನಸದಸ್ಯರಿಗೆ2ಕೋಟಿಯಷ್ಟು ಸಾಲವನ್ನು ನೀಡಲು ಮುಂದಾಗಿದೆ ಈಗ ಸೊಸೈಟಿಗೆ ಠೇವಣಿ ಹರಿದು ಬರುತ್ತಿದೆ, ಅದರ ಸದುಪಯೋಗವಾಗಬೇಕಿದೆ ಸದಸ್ಯರು ತಮಗೆ ಅನುಮಕೂಲವಾದ ಸಾಲವನ್ನು ಪಡೆಯುವಂತೆ ಮನವಿ ಮಾಡಿದ್ದು, ಈಗ ಸೊಸೈಟಿಯ ಮೇಲೆ ನಂಬಿಕೆ ಇಟ್ಟು ಸದಸ್ಯರು ತಮ್ಮ ಹಣವನ್ನು ಠೇವಣಿಯಲ್ಲಿ ಇಡುತ್ತಿದ್ದಾರೆ ಈ ನಂಬಿಕೆಯನ್ನು ಉಳಿಸಿಕೊಂಡು ಹೋಗುತ್ತೇನೆ ಎಂದು ಅಧ್ಯಕ್ಷ ಜಯ್ಯಣ್ಣ ಸದಸ್ಯರುಗಳಿಗೆ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯು ಹಾಗೂ 75 ವರ್ಷ ದಾಟಿದ ಸೊಸೈಟಿಯ ಹಿರಿಯ ಸಹಕಾರಿಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಉಪಾಧ್ಯಕ್ಷರಾದ ಸಿ.ಹೆಚ್.ಸೂರ್ಯಪ್ರಕಾಶ್, ನಿರ್ದೇಶಕರುಗಳಾದ ಡಾ.ರಹಮತ್ತುಉಲ್ಲಾ, ಬಿ.ವಿ.ಶ್ರೀನಿವಾಸ್ ಮೂರ್ತಿ, ಬಿ.ಎಂ.ನಾಗರಾಜ್‌ರಾವ್, ಕೆ.ಚಿಕ್ಕಣ್ಣ, ಎಸ್.ವಿ.ಪ್ರಸನ್ನ, ಕೆ.ಪ್ರಕಾಶ್, ಚಂದ್ರಪ್ಪ, ಶ್ರೀಮತಿ ಚಂಪಕ, ಶ್ರೀಮತಿ ಎನ್.ಎಂ.ಪುಷ್ಪವಲ್ಲಿ ಭಾಗವಹಿಸಿದ್ದರು.

ಕೆಪಿಎನ್ ಗಣೇಶಯ್ಯ ಪ್ರಾರ್ಥಿಸಿದರೆ ಪುಷ್ಪವಲ್ಲಿ ಸ್ವಾಗತಿಸಿದರು, ವ್ಯವಸ್ಥಾಪಕರಾದ ಮಹಮ್ಮದ್ ನಯಿಯಮ್ ಕಾರ್ಯಕ್ರಮ ನಿರೂಪಿಸಿದರು.





ಚಳ್ಳಕೆರೆ ನಗರದ ಗ್ರಾಮ ದೇವತೆ ಶ್ರೀಚಳ್ಳಕೆರೆಯಮ್ಮ ದೇವಸ್ಥಾನದಲ್ಲಿ ವರಮಹಾಲಕ್ಷ್ಮಿ ಹಬ್ಬದ ಹಿನ್ನೆಲೆಯಲ್ಲಿ ಶುಕ್ರವಾರ ತಡರಾತ್ರಿ ಶ್ರೀಚಳ್ಳಕೆರೆಯಮ್ಮ ದೇವಿಯ ರಥೋತ್ಸವ ನಡೆಸಲಾಯಿತು (ಎಡಚಿತ್ರ). ಚಳ್ಳಕೆರೆ ನಗರದ ವಾಸವಿ ದೇವಸ್ಥಾನದಲ್ಲಿ ಶ್ರಾವಣ ಮಾಸದ ಹಿನ್ನೆಲೆಯಲ್ಲಿ ಶನಿವಾರ ಶ್ರೀರಾಮಚಂದ್ರ, ಸೀತೆ, ಲಕ್ಷ್ಮಣರ ಸ್ವರೂಪಿ ದೇವರನ್ನು ಸ್ಥಾಪಿಸಿ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ನಡೆಸಲಾಯಿತು(ಮದ್ಯದ ಚಿತ್ರ). ಚಳ್ಳಕೆರೆ ನಗರದ ವಾಸವಿ ದೇವಸ್ಥಾನದಲ್ಲಿ ವರಮಹಾಲಕ್ಷ್ಮಿ ಹಬ್ಬದ ಹಿನ್ನೆಲೆಯಲ್ಲಿ ವಿಶೇಷವಾಗಿ ಅಲಂಕರಿಸಿ ಪೂಜಿಸಲಾಯಿತು.

## ರಾಯರ ಬೃಂದಾವನಕ್ಕೆ ರಜತಕವಚ ಸಮರ್ಪಣೆ



» ಚಳ್ಳಕೆರೆ

ವಾಲ್ಮೀಕಿ ನಗರದಲ್ಲಿರುವ ನಂಜನಗೂಡು ಶ್ರೀರಾಘವೇಂದ್ರಸ್ವಾಮಿ ಮಠದಲ್ಲಿ ಶ್ರೀರಾಘವೇಂದ್ರತೀರ್ಥ ಗುರುಸಾರ್ವಭೌಮರ 352ನೇ ಆರಾಧನ ಮಹೋತ್ಸವವನ್ನು ಆ.31ರಿಂದ ಸೆ.2ರ ತನಕ ನಡೆಸಲಾಗುವುದು ಎಂದು ವ್ಯವಸ್ಥಾಪಕರು ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ಪೂಜ್ಯ ಸುಬುದೇಂದ್ರ ತೀರ್ಥ ಶ್ರೀಪಾದಂಗಳರವರ ಆಶೀರ್ವಾದದಿಂದ ಕಾರ್ಯಕ್ರಮಗಳು ನಡೆಯಲಿದ್ದು, ಆ.30ರ ಬುಧವಾರ ಸಂಜೆ 6ಕ್ಕೆ ಧ್ವಜಾರೋಹಣ, ಗೋಪೂಜೆಯೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು, 31ರ ಗುರುವಾರ ಪೂರ್ವಾರಾಧನೆ, ಸೆ.1ರ ಶುಕ್ರವಾರ ಮದ್ವಾರಾಧನೆ, ಸೆ.2ರ ಶನಿವಾರ ಉತ್ತರಾಧನೆ ನಡೆಯಲಿದೆ. ಸೆ.1ರ ಶುಕ್ರವಾರ ಬೆಳಗ್ಗೆ 9.30ಕ್ಕೆ ಶ್ರೀರಾಯರ ಬೃಂದಾವನಕ್ಕೆ ನೂತನ ರಜತಕವಚ ಸಮರ್ಪಣೆ ಕಾರ್ಯಕ್ರಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಶಾಸಕ ಟಿ.ರಘುಮೂರ್ತಿ, ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರಯವರನ್ನು ಕಾರ್ಯಕ್ರಮದಲ್ಲಿ ಅಭಿನಂದಸಲಾಗುವುದು. ಭಕ್ತಾಧಿಗಳು ಆರಾಧನ ಮಹೋತ್ಸವ ಕಾರ್ಯಕ್ರಮಕ್ಕೆ ಹೆಚ್ಚಿನ ಸಹಕಾರ ನೀಡುವುದಲ್ಲದೆ, ಕಾರ್ಯಕ್ರಮದಲ್ಲಿ ಸ್ವತಃ ಪಾಲ್ಗೊಂಡು ರಾಯರ ಆಶೀರ್ವಾದ ಪಡೆಯುವಂತೆ ಮನವಿ ಮಾಡಲಾಗಿದೆ. ಕಾರ್ಯಕ್ರಮಕ್ಕೆ ಉದ್ಯಮಿ ಯು.ಬಿ.ಶೆಟ್ಟಿ ಸೇರಿದಂತೆ ಹಲವಾರು ಗಣ್ಯರನ್ನು ಆಹ್ವಾನಿಸಲಾಗಿದೆ ಎಂದು ಭಕ್ತಮಂಡಳಿಯ ಕಿಶೋರ್‌ಶೆಟ್ಟಿ ತಿಳಿಸಿದ್ದಾರೆ.

### ಟ್ವಿಟರ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಂದನೆ

## ಕೇವಲ 24 ಗಂಟೆಯಲ್ಲಿ ವಿದ್ಯುತ್ ಸಂಪರ್ಕ

» ಚಳ್ಳಕೆರೆ

ಸರ್ಕಾರ ಕೇವಲ ಗ್ಯಾರಂಟಿಗಳನ್ನು ಜಾರಿ ಮಾಡುವುದೊಂದೆ ಅಲ್ಲ ಬಡ ಜನರ ಸಂಕಷ್ಟಕ್ಕೂ 24ಗಂಟೆಯೊಳಗೆ ಸ್ಪಂದಿಸಿ ಅನಾಥ ವೃದ್ದೆಯ ಮನೆಗೆ ಬೆಳಕು ನೀಡುವ ಮೂಲಕ ಸಿ.ಎಂ ಸಹ ಸಾಮಾನ್ಯರ ಸಂಕಷ್ಟವನ್ನು ಆಲಿಸುವರು ಎಂದು ಸಾಬೀತು ಮಾಡಿದ್ದಾರೆ.

ತಾಲ್ಲೂಕಿನ ತಳಕು ಹೋಬಳಿಯ ಬಸಾಪುರ ಗ್ರಾಮದ ಯುವ ಕಾಂಗ್ರೆಸ್ ಮುಖಂಡ ಮಹೇಂದ್ರ ಎಂಬುವವರು ತಮ್ಮ ಗ್ರಾಮದ ಬಡ ವೃದ್ಧೆ ದೊಣಮ್ಮ(81) ಮನೆಯಲ್ಲಿ ವಿದ್ಯುತ್ ಇಲ್ಲದೆ ಇರುವ ಬಗ್ಗೆ ತಮ್ಮ ಟ್ವಿಟರ್ ಖಾತೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ಮಾಡಿದ್ದರು. ಕೂಡಲೇ ಅದಕ್ಕೆ ಸ್ಪಂದಿಸಿದ ಸಿದ್ದರಾಮಯ್ಯನವರು ಕೂಡಲೇ ಆ ವೃದ್ದೆಗೆ ವಿದ್ಯುತ್ ಒದಗಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ ಹಿನ್ನೆಲೆಯಲ್ಲಿ ಹಿರಿಯ ಜೀವಿಯ ಮನೆಯಲ್ಲಿ ಬೆಳಕು ಕಾಣಿಸಿದೆ. ಟ್ವಿಟರ್ ಖಾತೆಯಲ್ಲಿ ಪ್ರಕಟವಾದ 24ತಾಸಿನಲ್ಲೇ ವೃದ್ದೆಯ ಮನೆಗೆ ವಿದ್ಯುತ್ ಸಂಪರ್ಕ ನೀಡಲು



ಅಗತ್ಯಕ್ರಮಗಳನ್ನು ಕೈಗೊಂಡು ಬೆಳಕು ನೀಡಿ ಸ್ಪಂದಿಸಿದ ಸಿದ್ದರಾಮಯ್ಯನವರಿಗೆ ವೃದ್ದೆ ದೊಣಮ್ಮ, ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದ್ದಾರೆ.

ಅಜ್ಜಿಯ ಹಿನ್ನೆಲೆ:– ಸುಮಾರು 55 ವರ್ಷಗಳಿಂದ ದೊಣಮ್ಮ ಬಸಾಪುರದಲ್ಲೇ ವಾಸಿಸುತ್ತಿದ್ದಾರೆ. ಗ್ರಾಮದ ಜಮೀನುಗಳಲ್ಲಿ ಕೂಲಿನಾಲಿ ಮಾಡಿ ಬದುಕು ನಡೆಸುತ್ತಿದ್ದಾರೆ. ಇಂತಹ ಅಜ್ಜಿಯನ್ನು ಕಂಡ ಕಾಂಗ್ರೆಸ್ ಯುವ ಮುಖಂಡ ಮಹೇಂದ್ರ 25ರಂದು ಅಜ್ಜಿಯ ಮನೆಗೆ ವಿದ್ಯುತ್ ಇಲ್ಲದೆ ಇರುವ ಬಗ್ಗೆ ತಮ್ಮ ಟ್ವಿಟರ್ ಖಾತೆಯಲ್ಲಿ ಪ್ರಕಟಿಸಿದರು. ಅದಕ್ಕೆ ಸಿಎಂ ಕಚೇರಿಯಿಂದ ಕೂಡಲೇ ಸ್ಪಂದಿಸುವಂತೆ ಆದೇಶ ಬಂದ ಹಿನ್ನೆಲೆಯಲ್ಲಿ 81 ವರ್ಷದಿಂದ ಬೆಳಕು ಕಾಣದ ಅಜ್ಜಿ ಮನೆಯಲ್ಲಿ ಬೆಳಕು ಕಂಡಂತಾಗಿದೆ.

ಮದುವೆಯಾಗಿ ಒಂದೆರಡು ವರ್ಷದಲ್ಲೇ ಪತಿಯನ್ನು ಕಳೆದುಕೊಂಡ ಅಜ್ಜಿಗೆ ಮಕ್ಕಳಿಲ್ಲ, ಅನಾಥ ಅಜ್ಜಿಯಂತೆ ಜೀವಿಸುವ ಅಜ್ಜಿಗೆ ಯಾರೂ ಇಲ್ಲ. ಗ್ರಾಮದಲ್ಲೇ ಒಂದು ಸಣ್ಣ ಗುಡಿಸಲು ಮನೆ ನಿರ್ಮಿಸಿಕೊಂಡು ಜೀವಿಸುತ್ತಿದ್ದಾರೆ. ಕಳೆದ 81 ವರ್ಷದಿಂದ ಈ ಅಜ್ಜಿಗೆ ಕರೆಂಟ್ ಎಂದರೆ ಗೊತ್ತಿಲ್ಲ. ಪ್ರಸ್ತುತ ಗ್ರಾಮದ ಯುವಕ ಮಹೇಂದ್ರರವರ ಜಾಣ್ಮೆಯಿಂದ ಮುಖ್ಯಮಂತ್ರಿ ಗಮನಕ್ಕೆ ತಂದು 24 ಗಂಟೆಯಲ್ಲೇ ವಿದ್ಯುತ್ ಕಂಡು ಅಜ್ಜಿಯ ಮುಖದಲ್ಲಿ ಎಲ್ಲಿಲ್ಲದ ಸಂತಸ ಮೂಡಿದೆ.

## ಪ್ರಮುಖ ಸುದ್ದಿ

# ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

» ಚಿತ್ರದುರ್ಗ

ಸಮಾಜದಲ್ಲಿ ಆರ್ಥಿಕವಾಗಿ ಸಬಲರಾದವರು ಸಮಾಜದ ಬೆಳವಣಿಗೆಗೆ ಸಹಾಯ ಮಾಡಬೇಕಿದೆ ಎಂದು ಕುಂಚಿಗ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರು ಮಾಜಿ ಶಾಸಕರಾದ ಎಂ.ಬಿ.ತಿಪ್ಪೇರುದ್ರಪ್ಪ ಕರೆ ನೀಡಿದರು.



ಚಿತ್ರದುರ್ಗ ನಗರದ ಶ್ರೀ ನೀಲಕಂಠೇಶ್ವರ ಸ್ವಾಮಿ ಸಮುದಾಯ ಭವನದಲ್ಲಿ ಕುಂಚಿಗ ವೀರಶೈವ ಲಿಂಗಾಯತ ಸಮಾಜ ಮತ್ತು ಉತ್ಥಾನ ಟ್ರಸ್ಟ್ ವತಿಯಿಂದ ಹಮ್ಮಿಕೊಳ್ಳಲಾದ ಸಮಾಜದ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿಯು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದರು.ಸಮಾಜ ಈಗ ಕಷ್ಟದ ಕಾಲದಲ್ಲಿದೆ ಈ ಸಮಯದಲ್ಲಿ ಸಮಾಜ ಭಾಂಧವರು ನೆರವಿಗೆ ಬರಬೇಕಿದೆ, ಸಮಾಜದಲ್ಲಿ ಇದ್ದವರು ಸಹಾಯವನ್ನು ಮಾಡುವ ಮನೋಭಾವವನ್ನು ತೋರಬೇಕಿದೆ. ತಮ್ಮ ದುಡಿಮೆಯಲ್ಲಿ ಇಂತಿಷ್ಟು ಭಾಗವನ್ನು ದಾನ ಮಾಡುವ ಮನೋಭಾವವನ್ನು ಬೆಳಿಸಿಕೊಳ್ಳಿ, ಸತ್ತಾಗ ಯಾರೂ ಸಹಾ ಏನನ್ನು ತೆಗೆದುಕೊಂಡು ಹೋಗುವುದಿಲ್ಲ ಇದ್ದಾಗ ಬೇರೆಯವರಿಗೆ ಸಹಾಯ, ಸಹಕಾರವನ್ನು ಮಾಡುವ ಕಾರ್ಯವನ್ನು ಮಾಡುವಂತೆ ಮನವಿ ಮಾಡಿದರು.ನಮ್ಮಲ್ಲಿ ಸಹಾಯ ಮಾಡುವುದಕ್ಕಿಂತ ಅಸೂಯೇ ಪಡುವವರ ಸಂಖ್ಯೆ ಹೆಚ್ಚಾಗಿದೆ ಇದರಿಂದ ಏನನ್ನು ಸಾಧನೆ ಮಾಡಲು ಸಾಧ್ಯವಿಲ್ಲ, ನಮ್ಮಲ್ಲಿ ಅಧಿಕಾರ, ಅಂತಸ್ತು ಇದ್ದಾಗ ದಾನ ಮಾಡುವ ಕಾರ್ಯವನ್ನು ಮಾಡಬೇಕಿದೆ. ನಮ್ಮ ಸಮಾಜದ ಕಟ್ಟಡ ನಿರ್ಮಾಣಕ್ಕೆ ನಾನು ಸಹಾಯ ಮಾಡಿದ್ದೇನೆ ಇನ್ನೂ ಸಹಾ ಸಹಾಯವನ್ನು ಮಾಡುತ್ತೇನೆ ಎಂದರೆ ಯಾರು ಸಹಾ ಬರುವುದಿಲ್ಲ ಎಂದು ವಿಷಾಧಿಸಿ ನಮ್ಮ ಸಮಾಜದಲ್ಲಿ ದಾನ ಮಾಡುವ ಮನಸ್ಸುಗಳು ಹೆಚ್ಚಾಗಬೇಕಿದೆ ಆಗ ಮಾತ್ರ ಸಮಾಜದ ಪ್ರಗತಿ ಸಾಧ್ಯವಿದೆ ಎಂದು ತಿಪ್ಪೇರುದ್ರಪ್ಪ ತಿಳಿಸಿದರು.

ಸಮಾರಂಭದಲ್ಲಿ ಭಾಗವಹಿಸಿದ್ದ ಹಿರಿಯ ಪತ್ರಕರ್ತರಾದ ಉಜ್ಜನಪ್ಪ ಮಾತನಾಡಿ, ಮಕ್ಕಳಲ್ಲಿನ ಪ್ರತಿಭೆ ಅರಳಲು ಇಂತಹ ಕಾರ್ಯಕ್ರಮಗಳು ಅನಿವಾರ್ಯವಾಗಿದೆ. ಇಂದಿನ ದಿನಮಾನದಲ್ಲಿ ನಮ್ಮ ಜನತೆ ಕೆಲಸಕ್ಕಿಂತ ಹೆಚ್ಚಾಗಿ ಟಿವಿಯಲ್ಲಿ ಬರುವಂತ ಧಾರವಾಹಿಗಳನ್ನು ನೋಡಲು ಕಾಲವನ್ನು ಹರಣ ಮಾಡುತ್ತಾರೆ. ಇದರಿಂದ ಎನು ಪ್ರಯೋಜನ ಇಲ್ಲ ಎಂದು ಗೊತ್ತಿದ್ದರು ಸಹಾ ರಾತ್ರಿ 11.30ರವರೆಗೂ ಟಿವಿಯನ್ನು ನೋಡುತ್ತಾರೆ. ಆದರೆ ವಿದೇಶದಲ್ಲಿ ನಮ್ಮ ಕೆಲಸವನ್ನು ಮಾಡುವುದನ್ನು ಬಿಟ್ಟರೆ ಟಿವಿಯನ್ನು ನೋಡುವುದಿಲ್ಲ ನೋಡಿದರು ಸಹಾ ವಾರ್ತೆಗಳನ್ನು ಮಾತ್ರ ನೋಡುತ್ತಾರೆ ಎಂದರು.

ನಮ್ಮಲ್ಲಿಗ್ರಂಥಾಲಯಗಳುಹೆಚ್ಚಾಗಿದ್ದರೂ ಸಹಾ ಅದರ ಬಳಕೆ ಮಾತ್ರ ಕಡಿಮೆ ಇದೆ. ಇದು ಹೆಚ್ಚಾದಷ್ಟು ನಮ್ಮ ವಿದ್ಯಾವಂತ ಸಂಖ್ಯೆ ಹೆಚ್ಚಾಗುತ್ತದೆ. ನಮ್ಮಲ್ಲಿ ದೇಹದ ಪ್ರತಿಯೊಂದು ಅಂಗಗಳಿಗೂ ಸಹಾ ವೈದ್ಯರಿದ್ದಾರೆ, ಸಾಕಷ್ಟು ಪ್ರಮಾಣದಲ್ಲಿ ಇಂಜಿನಿಯರ್ ಗಳಿದ್ದಾರೆ. ಮಾಹಿತಿನ ತಂತ್ರಜ್ಞಾನದಲ್ಲಿ ಸಾಕಷ್ಟು ಹೆಸರು ಮಾಡಿದವರಿದ್ದಾರೆಆದರೂಸಹಾ ಇವುಗಳು ಬೇಡಿಕೆ ಕಡಿಮೆಯಾಗಿಲ್ಲ, ಈಗ ಪ್ರತಿಭಾ ಪುರಸ್ಕಾರಕ್ಕೆ ಒಳಗಾದ ವಿದ್ಯಾರ್ಥಿಗಳು ತಮ್ಮ ಮುಂದಿನ ಜೀವನವನ್ನು ಸಾಧ್ಯವಾದಷ್ಟು ಉತ್ತಮವಾಗಿಸಿಕೊಳ್ಳಿ ಎಂದು ಕರೆ ನೀಡಿದರು.ಕಾರ್ಯಕ್ರಮದಲ್ಲಿ ಸಮಾಜದ ಮುಖಂಡರಾದ ಕೃಷ್ಣಮೂರ್ತಿ, ಬಸವರಾಜಪ್ಪ, ಕುಬೇರಪ್ಪ ಮತ್ತು ರಾಜಶೇಖರಪ್ಪ ಭಾಗವಹಿಸಿದ್ದರು. ಭಾವನಾ ಪ್ರಾರ್ಥಿಸಿದರೆ, ಹರೀಶ್ ಸ್ವಾಗತಿಸಿದರು. ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿಯುನ 32 ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರಕ್ಕೆ ಒಳಗಾದರು.

## ಫಾಸ್ಟ್ ನ್ಯೂಸ್

### ಗಾನಗಂಧರ್ವ ಡಾ.ಎಸ್.ಪಿಬಿರವರ ಸ್ಮರಣಾರ್ಥ: ಶ್ರಾವಣ ಗಾಯನ ಸ್ಪರ್ಧೆ ಇಂದು

ಚಳ್ಳಕೆರೆ: ನಗರದ ನ್ಯೂ ಚಳ್ಳಕೆರೆ ಬೀಟ್ಸ್ ಮತ್ತು ರಾಜರತ್ನ ಮೆಲೋಡಿಸ್ ಸಂಯುಕ್ತಾಶ್ರಯದಲ್ಲಿ ಗಾನಗಂಧರ್ವ ಡಾ.ಎಸ್.ಪಿ.ಬಾಲಸುಬ್ರಮಣ್ಯರವರ ಸ್ಮರಣಾರ್ಥವಾಗಿ ಶ್ರಾವಣ ಗಾಯನ ಜಿಲ್ಲಾ ಮಟ್ಟದ ಕನ್ನಡ ಕರೋಕೆ ಗಾಯನ ಸ್ಪರ್ಧೆಯನ್ನು ಆಗಸ್ಟ್ 29ರ ಮಂಗಳವಾರ ಬೆಳಗ್ಗೆ 10ಕ್ಕೆ ಪಾವಗಡ ರಸ್ತೆಯ ಶ್ರೀಗುರುರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ವ್ಯವಸ್ಥಾಪಕ ಉಮೇಶ್‌ಚಂದ್ರ ಬ್ಯಾನರ್ಜಿ ತಿಳಿಸಿದರು.

ಈ ಬಗ್ಗೆ ಮಾಹಿತಿ ನೀಡಿದ ಆರ್.ರೇವಣಸಿದ್ದಪ್ಪ, ಚಿತ್ರಗೀತೆ, ಭಾವಗೀತೆ, ಜನಪದ ಗೀತೆ, ಭಕ್ತಿಗೀತೆ ಮುಂತಾದ ಗೀತೆಗಳನ್ನು ಹಾಡಲು ಅವಕಾಶ ಮಾಡಿಕೊಡಲಾಗುವುದು. ಎಲ್ಲಾ ವಯೋಮಿತಿಯ ಗಾಯಕರಿಗೆ ಅವಕಾಶವನ್ನು ಕಲ್ಪಿಸಲಾಗುತ್ತದೆ. ತೀರ್ಪುಗಾರರ ತೀರ್ಪು ಅಂತಿಮವಾಗಿರುತ್ತದೆ. ನಿಗದಿ ಪಡಿಸಿದ ಶುಲ್ಕ ನೀಡಿ ಹೆಸರು ನೊಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 94828 24003, 97415 04863, 91138 83125ಗೆ ಸಂಪರ್ಕಿಸಲು ಮನವಿ ಮಾಡಲಾಗಿದೆ.

### ಆದರ್ಶ ಶಾಲೆಯ ಆರ್ಹತೆ ಪಡೆದ ವಿದ್ಯಾರ್ಥಿಗಳಿಗೆ ನೇರ ಕೌನ್ಸಿಲಿಂಗ್ 31ಕ್ಕೆ

ಚಳ್ಳಕೆರೆ: ನಗರದ ಪಾವಗಡ ರಸ್ತೆಯ ಆದರ್ಶ ಶಾಲೆಯಲ್ಲಿ ಪ್ರಸ್ತುತ 2023-24ನೇ ಸಾಲಿನ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಅಂತಿಮ ಸುತ್ತಿನಲ್ಲಿ ಖಾಲಿನ ಇರುವ ಸ್ಥಾನಗಳಿಗೆ ಆ.31ರ ಬೆಳಗ್ಗೆ 10 ಗಂಟೆಗೆ ನೇರ ಕೌನ್ಸಿಲಿಂಗ್ ಪ್ರಾರಂಭವಾಗಲಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಮುಖ್ಯ ಶಿಕ್ಷಕ ಅಶೋಕರೆಡ್ಡಿ, ಸಂಬಂಧಪಟ್ಟ ಆರ್ಹತೆ ಪಡೆದ ವಿದ್ಯಾರ್ಥಿಗಳಿಗೆ ಈಗಾಗಲೇ ದೂರವಾಣಿ ಮೂಲಕ ನೇರ ಕೌನ್ಸಿಲಿಂಗ್ ಬಗ್ಗೆ ಮಾಹಿತಿ ನೀಡಲಾಗಿದೆ. ಆದರೂ ವಿದ್ಯಾರ್ಥಿಗಳಿಗೆ ತೊಂದರೆಯಾಗಬಾರದು ಎಂಬ ಉದ್ದೇಶದಿಂದ ನೇರ ಕೌನ್ಸಿಲಿಂಗ್ ಬಗ್ಗೆ ಮತ್ತೊಮ್ಮೆ ಮಾಹಿತಿ ನೀಡಲಾಗುತ್ತಿದೆ. ದಯಮಾಡಿ ನಿಗದಿತ ಅವಧಿಯಲ್ಲಿ ಆರ್ಹತೆ ಪಡೆದ ವಿದ್ಯಾರ್ಥಿಗಳು ಹಾಜರಾಗಿ ತಮ್ಮ ಪ್ರವೇಶ ಪಡೆದು ಶೈಕ್ಷಣಿಕ ಪ್ರಗತಿಗೆ ಸಹಕರಿಸಬೇಕೆಂದು ಅವರು ಮನವಿ ಮಾಡಿದ್ದಾರೆ.

### ಜೂಜಾಟ ಮತ್ತು ಅಕ್ರಮ ಮದ್ಯ ಸಾಗಾಟ: ಐವರ ಮೇಲೆ ಪ್ರಕರಣ

ಚಳ್ಳಕೆರೆ: ಚಳ್ಳಕೆರೆ ಠಾಣಾ ವ್ಯಾಪ್ತಿಯ ಹೊಸೂರು ತಾಂಡದ ಸಾರ್ವಜನಿಕ ರಸ್ತೆಯಲ್ಲಿ ಹಾಡುಹಗಲೇ ಇಸ್ಪೀಟ್ ಆಟವಾಡುತ್ತಿದ್ದ ಗುರುಪ್ರಸಾದ್ ಇತರೆ ಮೂವರನ್ನು ವಶಕ್ಕೆ ಪಡೆದ ಪೊಲೀಶರು ಅವರಿಂದ ಜೂಜಾಟದ ಹಣ 3150ರೂ ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ. ಮತ್ತೊಂದು ಪ್ರಕರಣದಲ್ಲಿ ಚಳ್ಳಕೆರೆಯಿಂದ ಗೊರ್ಲಕಟ್ಟೆ ಗ್ರಾಮದ ರಸ್ತೆಯಲ್ಲಿ ಸುಮಾರು 3 ಸಾವಿರ ಮೌಲ್ಯದ ಅಕ್ರಮ ಮದ್ಯವನ್ನು ಸಾಗಾಣಿಕೆ ಮಾಡುತ್ತಿದ್ದ ಅದೇ ಗ್ರಾಮದ ಶ್ರೀಧರ ಎಂಬುವವನ್ನು ಪೊಲೀಸರು ಪತ್ತೆ ಹಚ್ಚಿ ಆತನ ಮೇಲೆ ಪ್ರಕರಣ ದಾಖಲಿಸಿದ್ದಾರೆ. ತನಿಖೆ ಮುಂದುವರೆದಿದೆ.

### ಹೆಚ್‌ಡಿಡಿ ಮನಸ್ಸು ಮಾಡಿದ್ದರೆ ಎಷ್ಟು ಬೇಕಾದರೂ ಹಣ ಮಾಡಬಹುದಿತ್ತು

ಶ್ರಮಕ್ಕೆ ಸರಿಯಾದ ಫಲ ಸಿಕ್ಕಿಲ್ಲ ಎನ್ನುವುದು ನಮಗೂ ಗೊತ್ತಿದೆ. ಅವರು ಮನಸ್ಸು ಮಾಡಿದ್ದರೆ ಎಷ್ಟು ಬೇಕಾದರೂ ಹಣ ಮಾಡಬಹುದಿತ್ತು. ನೈಸ್ ಯೋಜನೆಗೆ ಹೆಚ್.ಡಿ.ದೇವೇಗೌಡರು ಒಪ್ಪಿಗೆ ಕೊಟ್ಟಿರಲಿಲ್ಲ. ಸಾಕಷ್ಟು ಹಣ ಸಿಗುತ್ತೆ ಎಂದು ಗೊತ್ತಿತ್ತು, ಆದ್ರೂ ಒಪ್ಪಿಗೆ ನೀಡಿರಲಿಲ್ಲ. ಇಂತಹ ವ್ಯಕ್ತಿತ್ವವನ್ನು ಗುರುತಿಸಬೇಕು ಎಂದು ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದ್ದಾರೆ.

### ನಾಳೆ ಜೆ.ಪಿ.ಭವನದಲ್ಲಿ ಸುದ್ದಿಗೋಷ್ಠಿ ಕರೆದಿದ್ದೇನೆ: ಹೆಚ್.ಡಿ.ದೇವೇಗೌಡ



ನಾಳೆ ಬೆಳಗ್ಗೆ 11 ಗಂಟೆಗೆ ಜೆ.ಪಿ.ಭವನದಲ್ಲಿ ಸುದ್ದಿಗೋಷ್ಠಿ ಕರೆದಿದ್ದೇನೆ ಎಂದು ಬೆಂಗಳೂರಿನಲ್ಲಿ ಜೆಡಿಎಸ್ ವರಿಷ್ಠ ಹೆಚ್.ಡಿ.ದೇವೇಗೌಡ ಹೇಳಿದ್ದಾರೆ. ಇಡೀ ರಾಜ್ಯದ ಪರಿಸ್ಥಿತಿ ಬಗ್ಗೆ ನಾಳೆ ಸುದ್ದಿಗೋಷ್ಠಿ ಕರೆದಿದ್ದೇನೆ. ಎಲ್ಲಾ ನೋಡಿರುವೆ, ಚಪ್ಪಲಿ ಹಾಕಿಲ್ಲ, ಹಳೆಯದ್ದು ನೆನಪಿಸಿಕೊಳ್ಳಲ್ಲ. ರಾಜ್ಯದ ಸಮಸ್ಯೆ ನೋಡುತ್ತಿದ್ದೇನೆ. 91ನೇ ವಯಸ್ಸಿನಲ್ಲೂ ಹಲವು ಸಮಸ್ಯೆ ಕಣ್ಣು ಮುಂದೆ ಬರುತ್ತೆ ಎಂದಿದ್ದಾರೆ.

# ಸಾಮಾಜಿಕ ಕಳಕಳಿ ಇದ್ದಾಗ ಮಾತ್ರ ಸಂಸ್ಥೆ ಬೆಳೆಯಲು ಸಾಧ್ಯ: ಸಾಣೇಹಳ್ಳಿ ಶ್ರೀ

» **ಚಿತ್ರದುರ್ಗ**

ಸಮಾಜದಲ್ಲಿ ಬಸವಣ್ಣನ ಆಶಯಗಳಿಗೆ ವಿರುದ್ಧವಾಗಿ ಘಟನೆಗಳು ನಡೆಯುತ್ತಿದೆ. ಕೆಟ್ಟದ್ದನ್ನು ನೋಡುತ್ತಿದ್ದೇವೆ, ಓಡುತ್ತಿದ್ದೇವೆ. ಹಾಗಾಗಿ ಮನದ ಭಾವವನ್ನು ಅರ್ಥ ಮಾಡಿಕೊಂಡು ಬದುಕು ನಡೆಸಬೇಕು ಎಂದು ಹೊಸದುರ್ಗ ತಾಲೂಕಿನ ಸಾಗಹಳ್ಳಿಯ ತರಳಬಾಳು ಶಾಖಾ ಮಠದ ಡಾ.ಶ್ರೀ ಪಂಡಿತಾರಾಧ ಶಿವಾಚಾರ್ಯ ಸ್ವಾಮೀಜಿ ಸಲಹೆ ನೀಡಿದರು.

ಸೀಬಾರ-ಗುತ್ತಿಯ ಒಳಿಯಿರುವ ವಿಶ್ವಮಾನವ ಸಾಂಸ್ಕೃತಿಕ ಮತ್ತು ವಿದ್ಯಾ ಸಂಸ್ಥೆಯಲ್ಲಿ ರವಾರ ಆಯೋಜಿಸಿದ್ದ ಸಂಸ್ಥೆಯ ರಜತ ಮಹೋತ್ಸವದ ಲಾಂಛನ ಅನಾವರಣ ಹಾಗೂ ಬೃಹತ್ ರಕ್ತದಾನ ಶಿಬಿರದ ಸಾಧ್ಯ ವಹಿಸಿ ಮಾತನಾಡಿದರು. ಕಣ್ಣು ಬಿಟ್ಟಲಿಲ್ಲ. ಭಗವಂತ ಇದ್ದಾನೆ. ನಾವು ಮಠ, ಮಂದಿರ, ಮಸೀದಿಗಳಲ್ಲಿ ದೇವರನ್ನು ಹುಡುಕುತ್ತಿದ್ದೇವೆ, ನಾನೇ ದೇವರು ಎನ್ನುವುದನ್ನು ಮರೆಯುತ್ತಿದ್ದೇವೆ. ಶಾಲೆಗಳಲ್ಲಿ ಮಕ್ಕಳಿಗೆ ಸಂಸಾರ ಕಲಿಸಬೇಕು. ಮಕ್ಕಳು ಪುಸ್ತಕದ ಕೀಟಗಳಾಗಬಾರದು, ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಬೇಕು, ಶ್ರೀಮಂತರಿಗೆ ಶಿಕ್ಷಣ ಎಂಬುದನ್ನು ದೂರ ಮಾಡಿದೆ'. ಸಂಸ್ಥೆ ಪ್ರಾರಂಭಿಸುವುದು ಬಹಳ ಸುಲಭ ಆದರೆ ಅದನ್ನು ಯಶಸ್ವಿಯಾಗಿ ಕಟ್ಟುವುದು ಕಷ್ಟ, ಸೇವಾ ಸ್ವಾಮೀಜಿ ಮನೋಭಾವನೆ, ತ್ಯಾಗದ ದೃಷ್ಟಿ, ಹೇಳಿದರು. ಸಾಮಾಜಿಕ ಕಳಕಳಿ ಇದ್ದಾಗ ಮಾತ್ರ ಕಟ್ಟುವ ಕ್ರಿಯೆ ಸುಲಭವಾಗುತ್ತದೆ. 'ಲೋಕದೃಷ್ಟಿಯ ಕುವೆಂಪು ಪುಸ್ತಕ, ಮಸ್ತಕದ ಜ್ಞಾನ ಬೇಕು. ವ್ಯವಹಾರಿಕ ಅರಿವು ಇರಬೇಕು ಎಂದರು.





> ಗ್ರಾಮೀಣ ಮಕ್ಕಳ ಕಲಿಕೆಗೆ ಸ್ನೇಹಿತರು ಕಟ್ಟಿದ ಸಂಸ್ಥೆ ರಜತ ಮಹೋತ್ಸವಕ್ಕೆ ಕಾಲಿಟ್ಟಿದೆ. ವರ್ಷ ಪೂರ್ತಿ ವಿವಿಧ ಆಯೋಜಿಸಿ ಕುವೆಂಪು ಕಾರ್ಯಕ್ರಮ ಜನ್ಮದಿನವಾದ ಡಿಸೆಂಬರ್ 29 ರಂದು ಸಮಾರೋಪಗೊಳಿಸಲಾಗುತ್ತದೆ.
>
> » **ನೀಲಕಂಠ ದೇವರು, ಸಂಸ್ಥೆ ಕಾರ್ಯದರ್ಶಿ**

> ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರದ್ದುಗೊಳಿಸುವುದು ಸರಿಯಲ್ಲ, ಅಂತರಾಷ್ಟ್ರೀಯ ಗುಣಮಟ್ಟದ ಶಿಕ್ಷಣ ಮಕ್ಕಳಿಗೆ ಸಿಗಬೇಕು. ಶಿಕ್ಷಣದ ವಿಚಾರದಲ್ಲಿ ಯಾವುದೇ ಸರ್ಕಾರ ರಾಜಕೀಯ ಮಾಡಬಾರದು.
>
> » **ಜಿ.ಎಚ್.ತಿಪ್ಪಾರೆಡ್ಡಿ, ಮಾಜಿ ಶಾಸಕ**

ಮಾಜಿ ಶಾಸಕ ಜಿ.ಎಚ್ ತಿಪ್ಪಾರೆಡ್ಡಿ ಮಾತನಾಡಿ, ಸ್ವಾತಂತ್ರ ನಂತರ ವಿದ್ಯಾಭ್ಯಾಸ ನೀಡಲು ದೇಶದ ಜನರಿಗೆ ಅಗತ್ಯವಿರುವಷ್ಟು ಶಾಲೆ ಸರಕಾರ ತೆರೆದಿಲ್ಲ, ಮಠಗಳು ಹಾಗೂ ಇಂತಹ ಸಂಸ್ಥೆಗಳು ಶಿಕ್ಷಣ ಕೊಡುತ್ತಿವೆ. ಇಂದು ಶಿಕ್ಷಣ ಸಂಸ್ಥೆ ಪೂರ್ಣ ಪ್ರಮಾಣದ ವ್ಯಾಪಾರ ಆಗಿದೆ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಸಂಸ್ಥೆಯ ಕಾರ್ಯದರ್ಶಿ ಎಂ.ನೀಲಕಂಠ ದೇವ ಪ್ರಸ್ತಾವಿಕವಾಗಿ ಮಾತನಾಡಿದರು. ಟಿ.ಎಚ್. ಬಂಡೆನ್ ಸಾವ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಎಚ್ ಜಲೀಲ್ ಸಾಬ್, ಉದ್ಯಮಿಗಳಾದ ದಾದಾ ಕಲಂದರ್, ಮಹಾವೀರ ಜೈನ್, ಕಲಾವಿದ ರೇವಣಸಿದ್ದಪ್ಪ, ಸದಸ್ಯ ಮೌಲಾನ ಸಾಬ್, ಮತ್ತಿತರರಿದ್ದರು. ಶಾಲೆಯ ಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು. ಸಂಸ್ಥೆಯ ಸಿಬ್ಬಂದಿ ಸೇರಿದಂತೆ ಇತರರು ರಕ್ತದಾನ ಮಾಡಿದರು.

# ರಾಷ್ಟ್ರೀಯ ನೇತ್ರದಾನ ಪ್ರಾಕ್ಷಿಕ ಉದ್ಘಾಟನೆ

» **ಚಿತ್ರದುರ್ಗ**

ಮರಣದ ನಂತರ ಕಣ್ಣುಗಳನ್ನು ದಾನ ಮಾಡುವುದರಿಂದ ಇತರೆ ಇಬ್ಬರಿಗೆ ಉಪಯೋಗವಾಗುತ್ತದೆ, ಇದರ ಬಗ್ಗೆ ಜನತೆಯಲ್ಲಿ ಅರಿವು ಮೂಡಿಸುವುದು ಅಗತ್ಯವಾಗಿದೆ ಎಂದು ಹಿರಿಯ ನೇತ್ರ ತಜ್ಞರಾದ ಪ್ರಭುದೇವ್ ತಿಳಿಸಿದರು.

ಚಿತ್ರದುರ್ಗ ನಗರದ ಎಸ್.ಆರ್.ಬಿ.ಎಂ.ಎಸ್. ರೋಟರಿ ಬಾಲಭವನದಲ್ಲಿ ಶನಿವಾರ ರಾತ್ರಿ ಬಸವೇಶ್ವರ ಪುನರ್ ಜ್ಯೋತಿ ಐ ಬ್ಯಾಂಕ್‌ವತಿಯಿಂದ ಹಮ್ಮಿಕೊಂಡಿದ್ದ ಆ. 25 ರಿಂದ ಸೆ. 08ರವರೆಗೆ 38ನೇ ರಾಷ್ಟ್ರೀಯ ನೇತ್ರದಾನ ಪ್ರಾಕ್ಷಿಕ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಕ್ಷಿಕಕ್ಕೆ ಸಂಬಂಧಪಟ್ಟಂತೆ ಭಿತ್ತಿ ಪತ್ರವನ್ನು ಬಿಡುಗಡೆಗೊಳಿಸಿ ಮಾತನಾಡಿದರು.

ಮಾನವನಿಗೆ ಕಣ್ಣು ಅತಿ ಮುಖ್ಯವಾದ ಅಂಗವಾಗಿದೆ. ಇದನ್ನು ಕಾಪಾಡಿಕೊಳ್ಳುವುದು ಅತಿ ಅನಿವಾರ್ಯವಾಗಿದೆ. ಕೆಲವೊಮ್ಮೆ ಕಣ್ಣಿನ ತೊಂದರೆ ಬರುತ್ತದೆ ಅದಕ್ಕೆ ಸರಿಯಾದ ರೀತಿಯಲ್ಲಿ ಚಿಕಿತ್ಸೆಯನ್ನು ಪಡೆಯವುದರ ಮೂಲಕ ನಿವಾರಿಸಿಕೊಳ್ಳಬೇಕಿದೆ ಇಲ್ಲವಾದರೆ ಕಣ್ಣನ್ನು ಕಳೆದುಕೊಳ್ಳುಬಹುದಾಗಿದೆ ಎಂದ ಅವರು, ಕೆಲವೊಮ್ಮೆ ಹೊರಗಿನ ವಾತಾವರಣದಿಂದ ಮತ್ತೇ ಕೆಲವೊಮ್ಮೆ ಅನುವಂಶೀಯತೆ ಇಂದ ಸಹಾ ಕಣ್ಣುನ ತೊಂದರೆ ಬರಬಹುದಾಗಿದೆ. ನಮ್ಮ ಮರಣದ ನಂತರ ನಮ್ಮ ಕಣ್ಣುಗಳನ್ನು ಹಾಳು ಮಾಡದೇ ಅದನ್ನು ಬೇರೆಯವರಿಗೆ ದಾನ ಮಾಡುವುದರ ಮೂಲಕ ಇತರ ಅಂಧರ ಬಾಳಿಗೆ ಬೆಳಕಾಗಬೇಕಿದೆ ಎಂದು ತಿಳಿಸಿದರು.

ಇಂದಿನ ದಿನಮಾನದಲ್ಲಿ ಕಣ್ಣು ಇಲ್ಲದೆ ಲಕ್ಷಾಂತರ ಜನತೆ ನೋವಿನಿಂದ ಬಳುತ್ತಿದ್ದಾರೆ ಇವರಿಗೆ ಮಾನವನ ಕಣ್ಣು ಮಾತ್ರ ಹೊಂದಿಕೆಯಾಗುತ್ತವೆ ಇತರೆ ಬೇರೆ ಯಾರ ಕಣ್ಣು ಸಹಾ ಹೊಂದಿಕೆಯಾಗುವುದಿಲ್ಲ, ಈ ಹಿನ್ನಲೆಯಲ್ಲಿ ಮಾನವ ತನ್ನ ಮರಣದ ನಂತರ ಕಣ್ಣುಗಳನ್ನು ಸುಡದೆ, ಹೂಳದೆ ದಾನವನ್ನು ಮಾಡಬೇಕಿದೆ, ಆದರೆ ಬಹಳಷ್ಟು ಜನತೆ ತಮ್ಮ ಮರಣದ ನಂತರ ಕಣ್ಣುಗಳನ್ನು ದಾನ ಮಾಡಲು ಮುಂದೆ ಬರುತ್ತಿಲ್ಲ ಇದಕ್ಕೆ ಮೂಢನಂಬಿಕೆ ಕಾರಣವಾಗಿರಬಹುದೆಂದು ಪ್ರಭುದೇವ ವಿಷಾಧಿಸಿದರು.ಕಣ್ಣುಗಳ ದಾನದ ಕಾರ್ಯವನ್ನು ಒಬ್ಬರಿಂದ ಮಾಡಲು ಸಾಧವ್ಯವಿಲ್ಲ ಇದರ ಬಗ್ಗೆ ಜನ ಜಾಗೃತಿಯನ್ನು ಮೂಡಿಸಲು ಇಂತಹ ಸಂಘ ಸಂಸ್ಥೆಗಳು ನೆರವು ಅಗತ್ಯವಾಗಿದೆ ಈ ಹಿನ್ನಲೆಯಲ್ಲಿ ಬಸವೇಶ್ವರ ಪುನರ್ ಐ ಜ್ಯೋತಿ ಬ್ಯಾಂಕ್ ಉತ್ತಮವಾದ ಕಾರ್ಯವನ್ನು ಮಾಡುತ್ತಿದೆ ಮರಣವನ್ನು ಹೊಂದಿದವರ ಕಣ್ಣುಗಳನ್ನು ದಾನವಾಗಿ ಪಡೆಯುವುದರ ಮೂಲಕ ಅದನ್ನು ಬೇರೆಯವರಿಗೆ ಜೋಡಿಸುವ ಸಲುವಾಗಿ ಅದನ್ನು ಸಂಬಂಧಪಟ್ಟವರಿಗೆ ತಲುಪಿಸುವ ಕಾರ್ಯವನ್ನು ಮಾಡುತ್ತಿದೆ. ಒಂದು ಕಣ್ಣು ದಾನ ಮಾಡಿದರೆ ಅದನ್ನು ಮೂರು ಜನರಿಗೆ ಅಳವಡಿಕೆ ಮಾಡಬಹುದಾಗಿದೆ ಎಂದು ತಿಳಿಸಿದರು.



ಬಸವೇಶ್ವರ ಪುನರ್ ಐ ಜ್ಯೋತಿ ಬ್ಯಾಂಕ್‌ನ ಅಧ್ಯಕ್ಷರಾದ ಶಿವರಾಂ ಮಾತನಾಡಿ, ಕಳೆದ 16 ವರ್ಷದಿಂದ ಈ ಬ್ಯಾಂಕ್ ಕೆಲಸವನ್ನು ಮಾಡುತ್ತಿದೆ. ಇದುವರೆವಿಗೂ 1650 ಕಣ್ಣುಗಳನ್ನು ಸಂಗ್ರಹ ಮಾಡಿ ಬೇರೆಯವರಿಗೆ ದಾನವಾಗಿ ಕೊಡಿಸಿದೆ.

ಒಂದು ವರ್ಷದಿಂದ ಹಿಡಿದು ಕೊನೆಯ ಸಾಯುವವರೆಗೂ ತಮ್ಮ ಕಣ್ಣುಗಳನ್ನು ತಮ್ಮ ಮರಣದ ನಂತರ ದಾನ ಮಾಡಬಹುದಾಗಿದೆ. ಭಾರತದಲ್ಲಿ 1.20 ಕೋಟಿ ಅಂಧರಿದ್ದಾರೆ ಇವರಿಗೆ ಕಣ್ಣುಗಳನ್ನು ಜೋಡಿಸಬೇಕಿದೆ. ಆದರೆ ನಮಗೆ ಸಿಗುವು ಕಣ್ಣುಗಳು ಸಂಖ್ಯೆ ಮಾತ್ರ ಕಡಿಮೆ ಇದೆ ಕೇವಲ 25000 ಕಣ್ಣುಗಳು ಮಾತ್ರ ದೂರಕುತ್ತಿವೆ, ಕಣ್ಣುಗಳಿಗೆ 68 ಲಕ್ಷ ಜನತೆ ಕಾಯುತ್ತಿದ್ದಾರೆ ನಮ್ಮಲ್ಲಿ ಬೇಡಿಕೆ ಹೆಚ್ಚಾಗಿದೆ ಆದರೆ ಪೂರೈಕೆ ಮಾತ್ರ ಕಡಿಮೆ ಇದೆ ಎಂದರು.

ಮಾಜಿ ಅಧ್ಯಕ್ಷರಾದ ಗಾಯತ್ರಿ ಮಾತನಾಡಿ ಆ. 25 ರಿಂದ ಪ್ರಾರಂಭವಾಗಿ ಸೆ. 08ವರೆಗೆ ನಡೆಯುವ ಈ ಕಾರ್ಯಕ್ರಮದಲ್ಲಿ ಎಲ್ಲರು ಸಹಾ ಸೈನಿಕರ ರೀತಿಯಲ್ಲಿ ಕೆಲಸ ಮಾಡಬೇಕಿದೆ ಜನತೆಗೆ ಕಣ್ಣುಗಳ ಮಹತ್ವವನ್ನು ತಿಳಿಸಬೇಕಿದೆ. ಇದು ಒಬ್ಬರಿಂದ ಆಗುವ ಕೆಲಸವಲ್ಲ ಎಲ್ಲರು ಸೇರಿ ಮಾಡುವ ಕೆಲಸವಾಗಿದೆ. ಇದಕ್ಕೆ ಎಲ್ಲರ ಸಹಾಯ ಮತ್ತು ಸಹಕಾರ ಅಗತ್ಯವಾಗಿದೆ. ಕಣ್ಣುಗಳನ್ನು ತೆಗೆಯಲು ಯಾವಾಗ ಬೇಕಾದರು ದೂರವಾಣಿ ಬರಬಹುದು ಆಗ ನಮಗೆ ಕಿರಿಕಿರಿ ಎನ್ನಿಸುತ್ತದೆ ಆದರೆ ಕೆಲಸ ಮಾಡಿದಾಗ ಧನ್ಯತಾ ಭಾವನೆ ಮೂಡುತ್ತದೆ ಎಂದರು.

ಕಾರ್ಯಕ್ರಮದಲ್ಲಿ ರೋಟರಿ ಕ್ಲಬ್ ಅಧ್ಯಕ್ಷರಾದ ಕನಕರಾಜು, ಚಿತ್ರದುರ್ಗ ರೋಟರಿ ಪೋರ್ಟೋ ಕ್ಲಬ್ ಅಧ್ಯಕ್ಷರಾದ ಗೀರೀಶ್ ಹಾಗೂ ಚಿನ್ಮೂಲಾದ್ರಿ ರೋಟರಿ ಕ್ಲಬ್‌ನ ಅಧ್ಯಕ್ಷರಾದ ಶಂಕ್ರಪ್ಪ ಭಾಗವಹಿಸಿದ್ದರು.

### ವರಮಹಾಲಕ್ಷ್ಮಿ ಹಬ್ಬದ ಪ್ರಯುಕ್ತ ಚಳ್ಳಕೆರೆಯಮ್ಮ ದೇವಸ್ಥಾನದಲ್ಲಿ ಪ್ರಕಾರೋತ್ಸವ

# ಮಹಿಳಾ ಭಕ್ತಾಧಿಗಳಿಂದಲೇ ತೇರು ಎಳೆಯುವ ಪದ್ಧತಿ

» **ಚಳ್ಳಕೆರೆ**

ನಗರದ ಗ್ರಾಮ ದೇವತೆ ಚಳ್ಳಕೆರೆಯಮ್ಮನ ದೇವಸ್ಥಾನದ ಆವರಣದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಸಹ ವರಮಹಾಲಕ್ಷ್ಮಿ ಹಬ್ಬದ ಪ್ರಯುಕ್ತ ಮಹಿಳಾ ಭಕ್ತಾಧಿಗಳೇ ಚಳ್ಳಕೆರೆಯಮ್ಮ ಉತ್ಸವ ಮೂರ್ತಿ ಹೊತ್ತ ರಥವನ್ನು ಪ್ರಕಾರದ ಸುತ್ತಲು ಎಳೆಯುವ ಮೂಲಕ ತಮ್ಮ ಭಕ್ತಿಯನ್ನು ಸಮರ್ಪಿಸಿದರು. ಚಳ್ಳಕೆರೆ ನಗರವೂ ಸೇರಿದಂತೆ ರಾಜ್ಯದ ಇತರ ಭಾಗಗಳಿಂದಲೂ ಸಹ ಅಧಿಕ ಸಂಖ್ಯೆಯ ಭಕ್ತರು ಬೆಳಗ್ಗೆಯಿಂದ ರಾತ್ರಿವರೆಗೂ ದೇವಸ್ಥಾನಕ್ಕೆ ಭೇಟಿ ನೀಡಿ ದೇವಿಯ ದರ್ಶನ ಪಡೆದರಲ್ಲದೆ, ತಮ್ಮ ಹರಿಕೆಗಳನ್ನು ಸಹ ಪೂರೈಸಿಕೊಂಡರು. ಈ ಸಂದರ್ಭದಲ್ಲಿ ಮಹಿಳಾ ಭಕ್ತರು ದೇವಸ್ಥಾನದ ಒಳ ಆವರಣದಲ್ಲಿ ದೀಪೋತ್ಸವ ಕಾರ್ಯಕ್ರಮವನ್ನೂ ಸಹ ನಡೆಸಿಕೊಟ್ಟರು. ವರಮಹಾಲಕ್ಷ್ಮಿ ಹಬ್ಬದ ಹಿನ್ನೆಲೆಯಲ್ಲಿ ದೇವಸ್ಥಾನದ ಆಡಳಿತ ಮಂಡಳಿ ದೇವಸ್ಥಾನವನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಿದ್ದರು. ಪೂಜಾ ಕಾರ್ಯಕ್ರಮದಲ್ಲಿ ಧರ್ಮದರ್ಶಿ ಗೌಡ್ರರಾಜಣ್ಣ ಹಾಗೂ ದೈವಸ್ಥರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಶಾಸಕ ಟಿ.ರಘುಮೂರ್ತಿಯಿಂದ ನಗರಸಭೆಯಲ್ಲಿ ಕುಂದುಕೊರತೆ, ಆಹವಾಲು ಸ್ವೀಕಾರ 28ರಂದು

» **ಚಳ್ಳಕೆರೆ**

ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಹ್ಯಾಟ್ರಿಕ್ ವಿಜಯ ಸಾಧಿಸಿದ ನಂತರ ಮೊದಲ ಬಾರಿಗೆ ನಗರಸಭೆಯಲ್ಲಿ ಸಾರ್ವಜನಿಕರ ಕುಂದುಕೊರತೆ ಹಾಗೂ ನಗರದ ನಾಗರೀಕರಿಗೆ ಮೂಲಭೂತ ಸೌಕರ್ಯಗಳ ಒದಗಿಸುವ ಬಗ್ಗೆ ಸಭೆ ನಡೆಸುವರು ಎಂದು ಪೌರಾಯುಕ್ತ ಸಿ.ಚಂದ್ರಪ್ಪ ತಿಳಿಸಿದರು. ಈ ಬಗ್ಗೆ ಮಾಹಿತಿ ನೀಡಿದ ವ್ಯವಸ್ಥಾಪಕ ಲಿಂಗರಾಜು, ಆ.28ರ ಸೋಮವಾರ ಬೆಳಗ್ಗೆ 11ಕ್ಕೆ ಕುಂದುಕೊರತೆಯ ಸಭೆ ಆಯೋಜಿಸಲಾಗಿದೆ. ನಗರಸಭೆಯಿಂದ ಸಾರ್ವಜನಿಕರಿಗೆ ನೀಡುವ ಇ-ಸ್ವತ್ತು, ಖಾತೆ ಬದಲಾವಣೆ, ಜನನ, ಮರಣ, ಕುಡಿಯುವ ನೀರು, ಚರಂಡಿ, ರಸ್ತೆ ನಿರ್ಮಾಣ, ಬೀದಿದೀಪ ಸೇರಿದಂತೆ ವಿವಿಧ ಸಮಸ್ಯೆಗಳ ಬಗ್ಗೆ ಸಾರ್ವಜನಿಕರಿಂದ ಆಹವಾಲುಗಳನ್ನು ಸ್ವೀಕರಿಸುವರು ಎಂದು ಅವರು ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಸುವ್ಯಸ್ಥಿತ ಸಮಾಜ ನಿರ್ಮಾಣಕ್ಕೆ ವಕೀಲರು ಹಾಗೂ ಕಾನೂನು ವಿದ್ಯಾರ್ಥಿಗಳ ಪಾತ್ರ ದೊಡ್ಡದು: ನ್ಯಾಯಾಧೀಶ ಜಿ.ಬಸವರಾಜು

# ಸರಸ್ವತಿ ಕಾನೂನು ಕಾಲೇಜಿನಲ್ಲಿ ಗ್ರಾಜ್ಯುಯೇಷನ್ ಡೇ

» **ಚಿತ್ರದುರ್ಗ**

ವಕೀಲ ವೃತ್ತಿಯಲ್ಲಿ ಪ್ರಾವಿಣ್ಯತೆ ಪಡೆದರೆ ನ್ಯಾಯಾಧೀಶರಿಗೂ ಹೆದರಬೇಕಾಗಿಲ್ಲ. ಹಾಗಂತ ನ್ಯಾಯಾಲಯ,ನ್ಯಾಯಾಧೀಶರಿಗೆ ಅಗೌರವ ತೋರಬಾರದು. ವಿನಯತೆ, ವಿನಮ್ರತೆಯಿಂದ ವಾದ ಮಾಡಬೇಕು ಎಂದು ಹೈಕೋರ್ಟ್ ಧಾರವಾಡ ಬೆಂಚ್‌ನ ನ್ಯಾಯಾಧೀಶರಾದ ಜಿ.ಬಸವರಾಜು ವಕೀಲರುಗಳಿಗೆ ತಿಳಿಸಿದರು.

ಇಲ್ಲಿನ ಸರಸ್ವತಿ ಕಾನೂನು ಕಾಲೇಜಿನಲ್ಲಿ ಶನಿವಾರ ಗ್ರಾಜ್ಯುಯೇಷನ್ ಡೇ ಉದ್ಘಾಟಿಸಿ ಮಾತನಾಡಿದ ನ್ಯಾಯಾಧೀಶರು ಸುವ್ಯಸ್ಥಿತ ಸಮಾಜ ನಿರ್ಮಾಣವಾಗಬೇಕಾದರೆ ಕಾನೂನು ವಿದ್ಯಾರ್ಥಿಗಳ ಹಾಗೂ ವಕೀಲರ ಪಾತ್ರ ದೊಡ್ಡದು. ದೇಶದ ಸ್ವಾತಂತ್ರ್ಯ ಕ್ಕಾಗಿ ಹೋರಾಡಿದವರಲ್ಲಿ ಸಾಕಷ್ಟು ವಕೀಲರುಗಳಿದ್ದಾರೆ. ರಾಷ್ಟ್ರಪಿತ ಮಹಾತ್ಮಗಾಂಧಿ, ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಇವರುಗಳು ವಕೀಲರಾಗಿದ್ದವರು.ನೊಂದವರಿಗೆ ನ್ಯಾಯ ಸಿಗಬೇಕಾದರೆ ಕಾನೂನು ಪದವಿ ಬೇಕು. ಅತ್ಯಂತ ಪವಿತ್ರವಾದ ವಕೀಲ ವೃತ್ತಿಯಲ್ಲಿ ಒಳ್ಳೆ ಹೆಸರು ಸಂಪಾದಿಸಿ ಮುಂದೆ ಬರಬೇಕಾದರೆ ಶ್ರದ್ದೆ, ಪ್ರಾಮಾಣಿಕತೆ, ಮಾನವೀಯತೆ, ಸಮಯ ಪ್ರಜ್ಞೆ ಮುಖ್ಯ ಎಂದು ಹೇಳಿದರು.



1965 ರಲ್ಲಿ ಕಾನೂನು ಕಾಲೇಜು ಆರಂಭವಾಯಿತು. ಚಿತ್ರದುರ್ಗದಲ್ಲಿ ಕಾಲೇಜು ಸ್ಥಾಪನೆಯಾಗದಿದ್ದರೆ ಆರ್ಥಿಕವಾಗಿ ಹಿಂದುಳಿದವರು ಕಾನೂನು ಪದವಿ ಪಡೆಯುವುದು ಕಷ್ಟವಾಗುತ್ತಿತ್ತು. 1988 ರಲ್ಲಿ ನಾನೂ ಕೂಡ ಇದೆ ಕಾಲೇಜಿನಲ್ಲಿ ಕಾನೂನು ಪದವಿ ಪಡೆದೆ. ಆಗ ಇಷ್ಟು ಸೌಲಭ್ಯವಿರಲಿಲ್ಲ. ನೀವುಗಳು ನಿಜವಾಗಿಯೂ ಅದೃಷ್ಟವಂತರು.ಕಾನೂನು ಕಾಲೇಜು ಆರಂಭಕ್ಕೆ ಕಾರಣಕರ್ತರಾದ ಎಲ್ಲರಿಗೂ ಅಭಿನಂದನೆಗಳನ್ನು ಸಲ್ಲಿಸುತ್ತೇನೆಂದರು.

ಕಾನೂನು ಪದವಿ ಮುಗಿಸಿಕೊಂಡು ವಕೀಲರಾದೊಡನೆ ಹಣದ ಹಿಂದೆ ಹೋಗಬೇಡಿ. ಎರಡು ವರ್ಷಗಳ ಕಾಲ ವೃತ್ತಿಯನ್ನು ಕಲಿಯಿರಿ. ವಕೀಲರ ಸಂಖ್ಯೆ ಜಾಸ್ತಿಯಾಗಿದೆ ಎಂದು ಯಾರು ಹೆದರುವುದು ಬೇಡ. ಎಲ್ಲಾ ಕ್ಷೇತ್ರದಲ್ಲಿಯೂ ವಕೀಲರ ಅವಶ್ಯಕತೆಯಿದೆ. ನಾನು ಕೂಡ ಇದೆ ಸರಸ್ವತಿ ಕಾನೂನು ಕಾಲೇಜಿನಲ್ಲಿ ಪದವಿ ಪಡೆದು ಐದು ವರ್ಷಗಳ ಕಾಲ ವಕೀಲನಾಗಿ ನಂತರ ನ್ಯಾಯಾಧೀಶನಾಗಿ ಆಯ್ಕೆಯಾದೆ. ನ್ಯಾಯಾಲಯದಲ್ಲಿ ಇಂಗ್ಲಿಷ್‌ನಲ್ಲಿ ವಾದ ಮಂಡಿಸಿದರೆ ಕೇಸನ್ನು ಗೆದ್ದುಬಿಡುತ್ತೇನೆಂಬ ಭ್ರಮೆ ಸರಿಯಲ್ಲ. ನ್ಯಾಯಾಧೀಶರ ಎದುರು ಕನ್ನಡದಲ್ಲಿಯೇ ವಾದ ಮಂಡಿಸಿ. ಇಂಗ್ಲಿಷ್ ಬರುವುದಿಲ್ಲ ಎನ್ನುವ ಹಿಂಜರಿಕೆ ಬೇಡ. ಕನ್ನಡದಲ್ಲಿ ವಾದ ಮಾಡಬಾರದೆಂದು ಎಲ್ಲಿಯೂ ನಿಬಂಧನೆಯಿಲ್ಲ. ವಿಚಾರ ಮಂಡನೆ ಮುಖ್ಯ. ಉದಾಸೀನ ಮಾಡದೆ ಫೈಲ್ ಓದಿ. ಬೆರಳ ತುದಿಯಲ್ಲಿಯೇ ಈಗ ಎಲ್ಲಾ ವಿಷಯಗಳು ಸಿಗುತ್ತದೆ. ವಕೀಲರು, ನ್ಯಾಯಾಧೀಶರು ತಮ್ಮ ಕೊನೆಯುಸಿರಿರುವತನಕ ಓದಬೇಕು ಎಂದರು.ಪ್ರತಿ ಕ್ಷಣದಲ್ಲಿಯೂ ಕಾನೂನು ಬದಲಾವಣೆಯಾಗುತ್ತಿರುತ್ತದೆ. ಐ.ಪಿ.ಸಿ. ಸಿ.ಆರ್.ಪಿ.ಸಿ. ಎವಿಡೆನ್ಸ್ ಆಕ್ಟ್ ಅಧ್ಯಯನ ಮಾಡಿ. ಕಾನೂನು ನಿಂತ ನೀರಲ್ಲ. ಕಾನೂನು ಬದಲಾವಣೆ ಮಾಡುವವರು ವಕೀಲರು. ನೀವುಗಳು ಹಾಕುವ ಶ್ರಮದಿಂದ ಸಮಾಜದಲ್ಲಿ ಏನೆಲ್ಲಾ ಬದಲಾವಣೆ ತರಬಹುದು. ಎಲ್ಲಿಯಾದರೂ ಅಕ್ರಮ, ಅನ್ಯಾಯ, ಭ್ರಷ್ಟಾಚಾರ ನಡೆಯುತ್ತಿದ್ದರೆ ನೋಡಿಕೊಂಡು ಸುಮ್ಮನಿರಬಾರದು. ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ನೀವುಗಳೆ ಸಲ್ಲಿಸಬಹುದು. ವೃತ್ತಿಯ ಜೊತೆ ಮಾನವೀಯತೆ ಇರಬೇಕಷ್ಟೆ. ಪ್ರಜಾಪ್ರಭುತ್ವದಲ್ಲಿ ಹೋರಾಟ ಇಲ್ಲದೆ ಏನನ್ನು ಪಡೆಯಲು ಆಗುವುದಿಲ್ಲ. ಹಕ್ಕಿಗಾಗಿ ಪ್ರತಿಯೊಬ್ಬರು ಹೋರಾಡಬೇಕಾಗಿರುವುದರಿಂದ ಕ್ರಾಂತಿಕಾರಿ ಗುಣ ಬೆಳೆಸಿಕೊಳ್ಳುವಂತೆ ಕರೆ ನೀಡಿದರು. ಕಾರ್ಯಾಂಗ ಶಾಸನಗಳನ್ನು ಅನುಷ್ಠಾನಗೊಳಿಸುವಲ್ಲಿ ವಿಫಲವಾದಾಗ ನ್ಯಾಯಾಂಗ ಮಧ್ಯ ಪ್ರವೇಶಿಸಬೇಕಾಗುತ್ತದೆ. ವಕೀಲರು ಕಾನೂನು ಅಂಶಗಳನ್ನು ಪರಿಪೂರ್ಣವಾಗಿ ತಿಳಿದುಕೊಂಡಿರಬೇಕು. ಹೊಸ ಹೊಸ ಕಾನೂನುಗಳನ್ನು ವಕೀಲರುಗಳು ಓದಬೇಕು. ಗುಮಾಸ್ತರ ಮಾತು ಕೇಳಿ ವಕಾಲತ್ತು ಮಾಡಬೇಡಿ. ಪ್ರಶ್ನೆ ಮಾಡುವ ಪರಿಪಾಠ ಬೆಳೆಸಿಕೊಳ್ಳಿ. ಕಕ್ಷಿದಾರ ವಕೀಲರುಗಳ ಮುಂದೆ ಬಂದಾಗ ಎಲ್ಲಾ ಜ್ಞಾನವು ನಿಮ್ಮ ಕಣ್ಣ ಮುಂದೆ ಬರಬೇಕು. ಪ್ರತಿ ಕ್ಷಣದಲ್ಲೂ ಯೋಚಿಸಬೇಕು. ಪ್ರತಿ ಹಂತದಲ್ಲೂ ವಕೀಲರ ಪಾತ್ರವಿದೆ ಎಂದರು.

## ಫಾಸ್ಟ್ ನ್ಯೂಸ್

### ಚೀನಾದಲ್ಲಿ ಯಾವುದೇ ಚರ್ಚ್, ಮಸೀದಿ, ದೇವಾಲಯಗಳು ಇಲ್ಲ

ಚೀನಾದಲ್ಲಿ ಯಾವುದೇ ಚರ್ಚ್, ಮಸೀದಿ, ದೇವಾಲಯಗಳು ಇಲ್ಲ. ವಿಧಾನಸೌಧದಲ್ಲಿ ಪ್ರಾರ್ಥನೆಗೆ ಅವಕಾಶ ಕೋರಿ ಎಆಐಖ ಒಐಆ ಪತ್ರ ವಿಚಾರವಾಗಿ ಮಾತನಾಡಿದ ಅವರು, ಪ್ರಾರ್ಥನೆಗೆ ಅವಕಾಶವಿಲ್ಲವೆಂದು ಸುಪ್ರೀಂಕೋರ್ಟ್ ಈ ಹಿಂದೆಯೇ ಹೇಳಿದೆ.
ಈಗ ಅವಕಾಶ ನೀಡಿದರೆ ಸುಪ್ರೀಂಕೋರ್ಟ್ ಆದೇಶ ಉಲ್ಲಂಘನೆ ಆಗುತ್ತೆ. ಒಂದು ವೇಳೆ ಪ್ರಾರ್ಥನೆಗೆ ಅವಕಾಶ ನೀಡಿದರೆ ಹೋರಾಟ ಮಾಡುತ್ತೇವೆ ಎಂದು ಶ್ರೀರಾಮಸೇನೆ ಸಂಸ್ಥಾಪಕ ಮುತಾಲಿಕ್ ಹೇಳಿದರು.

### ಇಸ್ರೋ ವಿಜ್ಞಾನಿಗಳು ದೇಶವೇ ಹೆಮ್ಮೆ ಪಡುವ ಕೆಲಸ ಮಾಡಿದ್ದಾರೆ

ಇಸ್ರೋ ವಿಜ್ಞಾನಿಗಳು ದೇಶವೇ ಹೆಮ್ಮೆ ಪಡುವಂತಹ ಕೆಲಸ ಮಾಡಿದ್ದಾರೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರದಲ್ಲಿ ಶ್ರೀರಾಮಸೇನೆಸಂಘಟನೆಯಸಂಸ್ಥಾಪಕಪ್ರಮೋದ್ ಮುತಾಲಿಕ್ ಹೇಳಿದ್ದಾರೆ. ಚಂದ್ರಯಾನ-3 ಯಶಸ್ಸಿನ ಕ್ರೆಡಿಟ್ ಇಸ್ರೋ ವಿಜ್ಞಾನಿಗಳಿಗೆ ಸಲ್ಲಬೇಕು. ಪ್ರಧಾನಿ ಮೋದಿ ವಿಜ್ಞಾನಿಗಳಿಗೆ ಪ್ರೋತ್ಸಾಹ, ಅಭಿನಂದನೆ ಸಲ್ಲಿಸಿದ್ದಾರೆ.

### ನಾಳೆ ಸುದ್ದಿಗೋಷ್ಠಿ ಕರೆದ ಶಂಕರಪಾಟೀಲ್ ಮುನೇನಕೊಪ್ಪ

ಮಾಜಿ ಸಚಿವ, ಧಾರವಾಡ ಜಿಲ್ಲೆ ನವಲಗುಂದ ಕ್ಷೇತ್ರದ ಮಾಜಿ ಶಾಸಕ ಶಂಕರಪಾಟೀಲ್ ಮುನೇನಕೊಪ್ಪ ಹುಬ್ಬಳ್ಳಿಯಲ್ಲಿ ನಾಳೆ ಮಧ್ಯಾಹ್ನ 12ಕ್ಕೆ ಸುದ್ದಿಗೋಷ್ಠಿ ಕರೆದಿದ್ದಾರೆ. ವಿಧಾನಸಭೆ ಚುನಾವಣೆಯಲ್ಲಿ ಓ.ಊ.ಕೋನರೆಡ್ಡಿ ವಿರುದ್ಧ ಸೋತಿದ್ದರು. ಜಿಲ್ಲೆಯ ಇಬ್ಬರು ಕಾಂಗ್ರೆಸ್ ಸೇರಬಹುದು ಎಂದು ಸಚಿವ ಲಾಡ್ ಹೇಳಿದ್ದರು. ಹಾಗಾಗಿ ಶಂಕರಪಾಟೀಲ್ ಮುನೇನಕೊಪ್ಪ ನಡೆ ತೀವ್ರ ಕುತೂಹಲ ಕೆರಳಿಸಿದ್ದಾರೆ.

### ಅಜ್ಜಯ್ಯನ ಹೆಸರು ತೆಗೆದುಕೊಂಡವರು ಈಗ ಉಲ್ಟಾ ಹೊಡೆದರು

ಅಜ್ಜಯ್ಯನ ಹೆಸರು ತೆಗೆದುಕೊಂಡವರು ಈಗ ಉಲ್ಟಾ ಹೊಡೆದರು. ಅವರು ಯಾಕೆ ಉಲ್ಟಾ ಹೊಡೆದರು ಅಂದ್ರೆ, ಅದೇ ಅಜ್ಜಯ್ಯನ ಶಕ್ತಿ. ನಾನೇನಾದ್ರೂ ತಪ್ಪು ಮಾಡಿದ್ದರೆ ತಾನೆ ಯೋಚನೆ ಮಾಡಬೇಕಿರುತ್ತೆ. ಪಾಪ ಗುತ್ತಿಗೆದಾರರದ್ದು ತಪ್ಪಿಲ್ಲ, ಕೆಲ ರಾಜಕೀಯದವರು ಮಾಡಿದ್ದು, ರಾಜಕೀಯದವರು ಮಿಸ್ ಗೈಡ್ ಮಾಡಿ ಗುತ್ತಿಗೆದಾರರ ದಿಕ್ಕು ತಪ್ಪಿಸಿದರು ಎಂದು ನೊಣವಿನಕೆರೆ ಅಜ್ಜಯ್ಯನ ಮಠದಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

### ನೊಣವಿನಕೆರೆ ಕಾಡಸಿದ್ದೇಶ್ವರ ಮಠಕ್ಕೆ ಡಿಸಿಎಂ ಡಿಕೆಶಿ ಭೇಟಿ

ತುಮಕೂರು ಜಿಲ್ಲೆ ತಿಪಟೂರು ತಾಲೂಕಿನ ನೊಣವಿನಕೆರೆ ಕಾಡಸಿದ್ದೇಶ್ವರ ಮಠಕ್ಕೆ ಡಿಸಿಎಂ ಡಿ.ಕೆ.ಶಿವಕುಮಾರ್ ಭಾನುವಾರ ಭೇಟಿ ನೀಡಿದ್ದಾರೆ. ಗಂಗಾಧರ ಅಜ್ಜಯ್ಯನ ಗದ್ದುಗೆ ಪೂಜೆ ಸಲ್ಲಿಸಿ ದರ್ಶನ ಪಡೆದುಕೊಂಡಿದ್ದಾರೆ.

### ಚಂದ್ರನ ಮೇಲೆ 10 ಸೆಂಟಿಮೀಟರ್ ಕೊರೆದು ಪರೀಕ್ಷೆ

ಚಂದ್ರನ ಮೇಲೆ 10 ಸೆಂಟಿಮೀಟರ್ ನೆಲ ಕೊರೆದು ಪ್ರಜ್ಞಾನ್ ರೋವರ್ ಪರೀಕ್ಷೆ ನಡೆಸಿದೆ. ಟ್ವೀಟ್ ಮೂಲಕ ಇಸ್ರೋ ಮಾಹಿತಿ ಹಂಚಿಕೊಂಡಿದೆ. ದಕ್ಷಿಣ ಧ್ರುವದಲ್ಲಿ 'ChaSTE' ಪರೀಕ್ಷೆಯನ್ನು ರೋವರ್ ನಡೆಸಿದೆ. ಚಂದ್ರನ ದಕ್ಷಿಣ ಧ್ರುವದಲ್ಲಿ ಪ್ರಜ್ಞಾನ್ ರೋವರ್ ಸಂಚಾರ ಇತಿಹಾಸದಲ್ಲೇ ಭಾರತದ ಮಹತ್ವದ ಹೆಜ್ಜೆಯಾಗಿದೆ.

### ನನ್ನ, ರೇಣುಕಾಚಾರ್ಯ ಭೇಟಿಗೆ ರಾಜಕೀಯ ಅರ್ಥ ಬೇಡ: ಸಚಿವ ಎಸ್ಸೆಸ್ಸೆಂ

ರೇಣುಕಾಚಾರ್ಯ ಕಾಂಗ್ರೆಸ್ ಸೇರಲ್ಲ, ಸೌಹಾರ್ದಯುತ ಭೇಟಿ ಅಷ್ಟೇ ಎಂದು ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಮಲ್ಲಿಕಾರ್ಜುನ್ ಹೇಳಿದರು. ರೇಣುಕಾಚಾರ್ಯ ಕಾಂಗ್ರೆಸ್ ಸೇರ್ಪಡೆ ಬಗ್ಗೆ ಯಾರೂ ಮಾತನಾಡಿಲ್ಲ. ನನ್ನ, ಎಂ.ಪಿ.ರೇಣುಕಾಚಾರ್ಯ ಭೇಟಿಗೆ ರಾಜಕೀಯ ಅರ್ಥ ಬೇಡ. ಟೀ ಕುಡಿಸಿ ಕಳುಹಿಸಿದ್ದೇನೆ, ಬೇರೆ ಯಾವುದೇ ಚರ್ಚೆ ನಡೆದಿಲ್ಲ ಎಂದು ಹೇಳಿದರು.

# ವೈದ್ಯಕೀಯ ಕಾಲೇಜು ಆರಂಭಕ್ಕೆ ಸಿದ್ದತೆ

## ಜಿಲ್ಲಾ ಆಸ್ಪತ್ರೆಯ ಜಾಗದಲ್ಲಿ ನೂತನ ವೈದ್ಯಕೀಯ ಕಾಲೇಜು ಸಂಕೀರ್ಣ: ಸಚಿವ.ಡಾ.ಶರಣ ಪ್ರಕಾಶ

» ಚಿತ್ರದುರ್ಗ

ಚಿತ್ರದುರ್ಗ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ ಆರಂಭಿಸಲು ಸಕಲ ಸಿದ್ದತೆಗಳನ್ನು ಮಾಡಿಕೊಳ್ಳಲಾಗಿದೆ. ರಾಷ್ಟ್ರೀಯ ವೈದ್ಯಕೀಯ ಆಯೋಗ (ಎನ್.ಎಂ.ಸಿ) ಪ್ರಸ್ತುತ 2023-24ನೇ ಸಾಲಿನಿಂದಲೇ 150 ಎಂ.ಬಿ.ಬಿ.ಎಸ್ ಸೀಟಿನೊಂದಿಗೆ ಪ್ರವೇಶಾತಿ ನೀಡಲು ಅನುಮತಿ ನೀಡಿದೆ. ಈಗಾಗಲೇ 26 ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದಾರೆ. ದಾವಣಗೆರೆವಿ.ವಿ.ಯಗುಡ್ಡದರಂಗವ್ವನಹಳ್ಳಿ ಸ್ನಾತಕೋತ್ತರ ಜ್ಞಾನಗಂಗೋತ್ರಿ ಆವರಣದಲ್ಲಿ ಪ್ರಥಮ ವರ್ಷದ ಬೋಧನೆ ಆರಂಭಿಸಲಾಗುವುದು ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ದಮಶೀಲತೆ ಹಾಗೂ ಜೀವನೋಪಾಯ ಸಚಿವ ಡಾ.ಶರಣಪ್ರಕಾಶ ಆರ್ ಪಾಟೀಲ್ ಹೇಳಿದರು.

ನಗರದ ಜಿಲ್ಲಾ ಪಂಚಾಯತಿ ಮಿನಿ ಸಭಾಂಗಣದಲ್ಲಿಈಕುರಿತುಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

ವೈದ್ಯಕೀಯ ಕಾಲೇಜು ನಿರ್ಮಾಣಕ್ಕೆ ಕಳೆದ ಸರ್ಕಾರದ ಅವಧಿಯಲ್ಲಿ ಟೆಂಡರ್ ಕರೆಯಲಾಗಿದೆ. ಸದ್ಯ ನಿರ್ಮಾಣದ ಕೆಲಸ ಆರಂಭವಾಗಬೇಕಿದೆ. ಎರಡು ವರ್ಷದಲ್ಲಿ ಕಾಮಗಾರಿ ಪೂರ್ಣಗೊಳ್ಳಬಹುದು. ತಾತ್ಕಾಲಿಕ ಹಾಗೂ ಪರ್ಯಾಯವಾಗಿ ದಾವಣಗೆರೆ ವಿ.ವಿ. ಅವರು ಜ್ಞಾನಗಂಗೋತ್ರಿ ಆವರಣದಲ್ಲಿ ನೀಡಿರುವ ಕಟ್ಟಡದಲ್ಲಿ, ಪ್ರಯೋಗಾಲಯವನ್ನು ಸ್ಥಾಪಿಸಿ ಪ್ರಥಮ ವರ್ಷದ ತರಗತಿಗಳನ್ನು ಪ್ರಾರಂಭಿಸಲಾಗುವುದು ಎಂದರು.

ಸದ್ಯ ಇರುವ ಜಿಲ್ಲಾ ಆಸ್ಪತ್ರೆ ಆವರಣದಲ್ಲಿಯೇ ನೂತನ ವೈದ್ಯಕೀಯ ಕಾಲೇಜು ಕಟ್ಟಡ ನಿರ್ಮಿಸಲು ಎಲ್ಲಾ ಜನಪ್ರತಿನಿಧಿಗಳು ಒಲವು ತೋರಿದ್ದಾರೆ. ವಿಸ್ತೃತಯೋಜನಾವರದಿಯುಸಿದ್ಧವಾಗಿದೆ. ಜಿಲ್ಲಾ ಆಸ್ಪತ್ರೆಗೆ ಹೊಂದಿಕೊಂಡತೆ ಇರುವ ಸರ್ಕಾರಿ ನರ್ಸಿಂಗ್ ಕಾಲೇಜು ಮತ್ತು ಹಾಸ್ಟೆಲ್‌ನ್ನು ಸೂಕ್ತ ಜಾಗಕ್ಕೆ ಸ್ಥಳಾಂತರಿಸಲಾಗುವುದು. ಪ್ರಸ್ತುತ ಜಿಲ್ಲಾ



ಆಸ್ಪತ್ರೆ 450 ಬೆಡ್ ಹೊಂದಿದೆ. ಇದರ ಜೊತೆಗೆ ನೂತನ ವೈದ್ಯಕೀಯ ಕಾಲೇಜು ನಿರ್ಮಾಣದ ಯೋಜನೆಯಲ್ಲಿ 150 ಬೆಡ್ ಆಸ್ಪತ್ರೆ ನಿರ್ಮಾಣ, ನರ್ಸಿಂಗ್ ಕಾಲೇಜು, ಬೊಧನೆ ಹಾಗೂ ವಸತಿ ನಿಲಯಗಳನ್ನು ಸಹ ನಿರ್ಮಿಸಲಾಗುವುದು ಎಂದರು.

**ಬೋಧನಾ ಸಿಬ್ಬಂದಿ ನೇಮಕ ಹಾಗೂ ಪರಿಕರ ಖರೀದಿಗೆ ಅನುಮತಿ :** ಸರ್ಕಾರ ವೈದ್ಯಕೀಯ ಕಾಲೇಜಿಗೆ ಅಗತ್ಯ ಇರುವ 79 ಹುದ್ದೆಗಳನ್ನು ಸೃಜಿಸಿರುವ ಸರ್ಕಾರ ಆದೇಶ ಹೊರಡಿಸಿದೆ. ಇದಕ್ಕೆ ಆರ್ಥಿಕ ಇಲಾಖೆಯು ಅನುಮತಿ ನೀಡಿದೆ. ಸದ್ಯ 17 ವೈದ್ಯಕೀಯ ಬೋಧಕರು, 5 ಕ್ಲರ್ಕ್,20 ಗ್ರೂಪ್ 'ಡಿ' ಸಿಬ್ಬಂದಿ ಸೇರಿದಂತೆ, ಅಗತ್ಯ ಪರಿಕರಗಳು ಖರೀದಿಸಲು ಅನುಮತಿ ನೀಡುವಂತೆ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ವಿಶೇಷ ಅಧಿಕಾರಿ ಡಾ.ಯುವರಾಜ್ ಸಭೆಯಲ್ಲಿ ತಿಳಿಸಿದರು.

ಈಗಾಗಲೇ ವಿದ್ಯಾರ್ಥಿಗಳು 2023-24ನೇ ಸಾಲಿಗೆ ಪ್ರವೇಶಾತಿ ಪಡೆದಿರುವುದರಿಂದ ಸೆಪ್ಟೆಂಬರ್ ತಿಂಗಳಿನಲ್ಲಿ ತರಗತಿಗಳನ್ನು ಆರಂಭಿಸಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ಮೊದಲನೇ ಸಾಲಿನ ವಿದ್ಯಾರ್ಥಿಗಳಿಗೆ ತರಗತಿಗಳನ್ನು ಆರಂಭಿಸಲು ಹುಬ್ಬಳ್ಳಿ, ಬಳ್ಳಾರಿ, ಕೊಪ್ಪಳ, ಗದಗ ಮತ್ತು ಶಿವಮೊಗ್ಗ ಸರ್ಕಾರಿ ವೈದ್ಯಕೀಯ ಕಾಲೇಜುಗಳಿಂದ ತಾತ್ಕಾಲಿಕವಾಗಿ ಬೋಧಕ ಸಿಬ್ಬಂದಿಗಳನ್ನು ನೇಮಿಸುವಂತೆ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಚಿತ್ರದುರ್ಗ ಜಿಲ್ಲಾಸ್ಪತ್ರೆಯು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದಲ್ಲಿ ಇದ್ದು, ವೈದ್ಯಕೀಯ ಕಾಲೇಜಿಗೆ ಬೋಧಕ ಆಸ್ಪತ್ರೆಯಾಗಿ ಹಸ್ತಾಂತರಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಮಾಹಿತಿ ನೀಡಿದರು.

ಇದಕ್ಕೆ ಸ್ಪಂದಿಸಿದ ಸಚಿವ ಡಾ.ಶಿವಪ್ರಕಾಶ ಆರ್ ಪಾಟೀಲ್, ಸರ್ಕಾರ ಸೃಜಿಸಿರುವ 79 ಹುದ್ದೆಗಳಿಗೆ ರೋಸ್ಟರ್ ಬಿಂದು ಅಳವಡಿಸಲು ಇಲಾಖೆಗೆ ಪತ್ರ ಬರೆಯಿರಿ. ಪ್ರಥಮ ವರ್ಷದ ತರಗತಿಗಳನ್ನು ಆರಂಭಿಸಲು ಅಗತ್ಯ ಇರುವ ವೈದ್ಯಕೀಯ ಬೋಧಕರನ್ನು ಸರ್ಕಾರ ಶೀಘ್ರವೇ ನೇಮಿಸಲಿದೆ. ಉಳಿದಂತೆ ಸ್ಥಳೀಯವಾಗಿ ಗ್ರೂಪ್ ಡಿ ಹುದ್ದೆಗಳನ್ನು ನೇಮಿಸಿಕೊಳ್ಳಬಹುದು. ಕಾಲೇಜು ಆರಂಭಕ್ಕೆ ಬೇಕಾದ ಪರಿಕರಗಳನ್ನು ಅಲ್ಪಾವಧಿ ಟೆಂಡರ್ ಕರೆದು ಖರೀದಿಸಲು ಸೂಚಿಸಿದರು.

ಹಳೆಯ ಕಟ್ಟಡ ನೆಲಸಮಗೊಳಿಸಲು ಸೂಚನೆ : ಜಿಲ್ಲಾ ಆಸ್ಪತ್ರೆಯು ಆವರಣದಲ್ಲಿ 24 ಹಳೆಯ ಕಟ್ಟಡಗಳನ್ನು ಲೋಕೋಪಯೋಗಿ ಇಲಾಖೆಯಿಂದ ಅನುಮತಿ ಪಡೆದು ನೆಲಸಮಗೊಳಿಸುವಂತೆ ಸಚಿವರು ಸೂಚನೆ ನೀಡಿದರು. ಈಗ ಆರೋಗ್ಯ ಇಲಾಖೆಯ ಒಡತನದಲ್ಲಿ ಇರುವ ಜಿಲ್ಲಾ ಆಸ್ಪತ್ರೆಯನ್ನು ಜಾಗವನ್ನು ವೈದ್ಯಕೀಯ ಶಿಕ್ಷಣ ಇಲಾಖೆ ಅಧೀನಕ್ಕೆ ಪಡೆದುಕೊಳ್ಳಲಾಗುವುದು. ಜಿಲ್ಲಾ ಆಸ್ಪತ್ರೆ ಅತ್ಯಗತ್ಯ ಇರುವ ಕಟ್ಟಡಗಳನ್ನು ಹೊರತು ಪಡಿಸಿ ಬೇರೆ ಕಟ್ಟಡಗಳನ್ನು ನೆಲಸಮಗೊಳಿಸಿ, ಮೊದಲಿಗೆ ವೈದ್ಯಕೀಯ ಕಾಲೇಜಿ ಆಡಳಿತಾತ್ಮಕ ವಿಭಾಗದ ಕಾಮಗಾರಿಯನ್ನು ಆರಂಭಿಸುವಂತೆ ಸಚಿವ ಡಾ.ಶಿವಪ್ರಕಾಶ ಆರ್ ಪಾಟೀಲ್ ನಿರ್ದೇಶನ ನೀಡಿದರು.

ಎರಡು ವರ್ಷ ಕಡ್ಡಾಯ ಸೇವೆ ನಿಯಮ ರೂಪಿಸಿ: ಎಂಬಿಬಿಎಸ್ ಹಾಗೂ ಸ್ನಾತಕೋತ್ತರ ವೈದ್ಯಕೀಯ ಪದವಿ ಪಡೆದ ವಿದ್ಯಾರ್ಥಿಗಳು ಕಡ್ಡಾಯವಾಗಿ ಎರಡು ವರ್ಷ ರಾಜ್ಯದಲ್ಲಿ ಸೇವೆ ಸಲ್ಲಿಸುವ ನಿಯಮ ರೂಪಿಸಬೇಕು ಎಂದು ಹೊಳಲ್ಕೆರೆ ಶಾಸಕ ಎಂ.ಚಂದ್ರಪ್ಪ ಸಲಹೆ ನೀಡಿದರು.

ರಾಜ್ಯ ಸರ್ಕಾರ ಸಾವಿರಾರು ಕೋಟಿ ರೂಪಾಯಿಗಳ ಖರ್ಚು ಮಾಡಿ ವೈದ್ಯಕೀಯ ಶಿಕ್ಷಣ ನೀಡುತ್ತಿದೆ. ಆದರೆ ಸರ್ಕಾರಿ ವೈದ್ಯಕೀಯ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡಿದ ವೈದ್ಯಕೀಯ ಹಾಗೂ ಸ್ನಾತಕೋತ್ತರ ವೈದ್ಯಕೀಯ ಪದವಿ ಪಡೆದ ವಿದ್ಯಾರ್ಥಿಗಳು ಕೋರ್ಸ್ ಮುಗಿದ ನಂತರ ವಿದೇಶಗಳಿಗೆ ಹೋಗುತ್ತಾರೆ. ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಒಬ್ಬ ವೈದ್ಯರು ಇರುವುದಿಲ್ಲ. ಈ ನಿಟ್ಟಿನಲ್ಲಿ ವೈದ್ಯಕೀಯ ಶಿಕ್ಷಣ ಪಡೆದ ವಿದ್ಯಾರ್ಥಿಗಳು ರಾಜ್ಯದಲ್ಲಿ ಕಡ್ಡಾಯವಾಗಿ ಎರಡು ವರ್ಷ ಸೇವೆ ಸಲ್ಲಿಸುವ ನಿಯಮ ರೂಪಿಸಬೇಕು ಎಂದು ಹೇಳಿದರು.

ಇದಕ್ಕೆ ಪ್ರತಿಕ್ರಿಯಿಸಿದ ವೈದ್ಯಕೀಯ ಶಿಕ್ಷಣ ಸಚಿವರು, ರಾಜ್ಯದಲ್ಲಿ ಎಂಬಿಬಿಎಸ್ ವೈದ್ಯಕೀಯ ಪದವಿ ಪಡೆದ ವಿದ್ಯಾರ್ಥಿಗಳಿಗೆ ಈಗಾಗಲೇ ಒಂದು ವರ್ಷ ಸೇವೆ ಸಲ್ಲಿಸುವುದನ್ನು ಕಡ್ಡಾಯಗೊಳಿಸಲಾಗಿದೆ ಎಂದು ತಿಳಿಸಿದರು.ಜಿಲ್ಲಾ ಉಸ್ತುವಾರಿ ಉಸ್ತುವಾರಿ ಸಚಿವ ಡಿ.ಸುಧಾಕರ್ ಮಾತನಾಡಿ, ಜಿಲ್ಲೆಯ ಎಲ್ಲಾ ಶಾಸಕರ ತೀರ್ಮಾನದಂತೆ ಜಿಲ್ಲಾಸ್ಪತ್ರೆಯ ಆವರಣದಲ್ಲಿಯೇ ಚಿತ್ರದುರ್ಗ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ನಿರ್ಮಾಣ ಮಾಡಲಾಗುವುದು. 2023ರ ಸೆಪ್ಟೆಂಬರ್ 15ರಂದು ಕಾಲೇಜು ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲಾಗುವುದು ಎಂದರು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಮಾತನಾಡಿ,ಪ್ರಸಕ್ತಶೈಕ್ಷಣಿಕವರ್ಷದಿಂದಲೇ 150 ಪ್ರವೇಶಾತಿಗಳೊಂದಿಗೆ ಚಿತ್ರದುರ್ಗ ವೈದ್ಯಕೀಯ ಕಾಲೇಜು ಪ್ರಾರಂಭಿಸಲು ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ. ಚಿತ್ರದುರ್ಗ ಜಿಲ್ಲಾ ತರಬೇತಿ ಸಂಸ್ಥೆಯಲ್ಲಿ ಬಾಲಕರಿಗೆ ಮತ್ತು ಜಿಲ್ಲಾ ಆಸ್ಪತ್ರೆ ಆವರಣದಲ್ಲಿರುವ ಜಿಎನ್‌ಎಂ ಹಾಸ್ಟೆಲ್‌ನಲ್ಲಿ ಬಾಲಕಿಯರಿಗೆ ಹಾಸ್ಟೆಲ್‌ನಲ್ಲಿ ತಾತ್ಕಾಲಿಕ ವ್ಯವಸ್ಥೆ ಕಲ್ಪಿಸಲಾಗಿದೆ. ವೈದ್ಯಕೀಯ ಕಾಲೇಜು ಪ್ರಾರಂಭಿಸಲು ಮೂಲಸೌಲಭ್ಯದ ಅವಶ್ಯಕತೆ ಇದ್ದು, ಈ ನಿಟ್ಟಿನಲ್ಲಿ ತಕ್ಷಣ ಕ್ರಮವಹಿಸಿ ಸೂಕ್ತ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಹೇಳಿದರು.ಸಭೆಯ ನಂತರ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣ ಪ್ರಕಾಶ್ ಆರ್.ಪಾಟೀಲ ಹಾಗೂ ಜಿಲ್ಲಾ ಉಸ್ತುವಾರಿ ಉಸ್ತುವಾರಿ ಸಚಿವ ಡಿ.ಸುಧಾಕರ್, ಜಿಲ್ಲೆಯ ಶಾಸಕರು, ಅಧಿಕಾರಿಗಳು ದಾವಣಗೆರೆ ವಿಶ್ವವಿದ್ಯಾನಿಲಯದ ಗುಡ್ಡದರಂಗವ್ವನಹಳ್ಳಿ ಸ್ನಾತ ಕೋತ್ತರ ಜ್ಞಾನಗಂಗೋತ್ರಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಭೆಯಲ್ಲಿ ಶಾಸಕರಾದ ಕೆ.ಸಿ.ವೀರೇಂದ್ರ ಪಪ್ಪಿ, ಬಿ.ಜಿ.ಗೋವಿಂದಪ್ಪ, ಟಿ. ರಘುಮೂರ್ತಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಆರ್.ರಂಗನಾಥ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

# ಪ್ರಚಾರಕ್ಕಾಗಿ ಸಚಿವರನ್ನು ಭೇಟಿ ಮಾಡುತ್ತಿದ್ದಾರೆ ರೇಣುಕಾಚಾರ್ಯ: ಬಸವರಾಜು ವಿ.ಶಿವಗಂಗಾ

» ಚನ್ನಗಿರಿ

ಇತ್ತೀಚಿಗೆ ಹೊನ್ನಾಳಿ ಮಾಜಿ ಶಾಸಕರಾದ ರೇಣುಕಾಚಾರ್ಯ ಕಾಂಗ್ರೆಸ್ ಸಚಿವರನ್ನ ಭೇಟಿ ಮಾಡುತ್ತಿದ್ದು, ಸ್ಥಳೀಯ ನಿಷ್ಠಾವಂತ ಕಾರ್ಯಕರ್ತರಿಗೆ ಗೊಂದಲ ಉಂಟಾಗುತ್ತಿದೆ ಎಂದು ಶಾಸಕರಾದ ಬಸವರಾಜು ವಿ ಶಿವಗಂಗಾ ತಿಳಿಸಿದರು.



ಪಟ್ಟಣದಲ್ಲಿ ಮಾತನಾಡಿದ ಅವರು ರೇಣುಕಾಚಾರ್ಯ ಪ್ರಚಾರ ಪ್ರಿಯರು, ಅಧಿಕಾರ ಇರಲಿ ಬಿಡಲಿ ಅವರಿಗೆ ಪ್ರಚಾರ ಬೇಕು ಹೀಗಾಗಿ ಸಚಿವರ ಭೇಟಿ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಫೋಟೋ ಹಾಕಿಕೊಳ್ಳುತ್ತಿದ್ದಾರೆ. ಕ್ಷೇತ್ರದ ಸಮಸ್ಯೆಗಳ ನೆಪದಲ್ಲಿ ಸಚಿವರುಗಳನ್ನ ಭೇಟಿ ಮಾಡುತ್ತಿದ್ದಾರೆ. ವಿರೋಧ ಪಕ್ಷದ ನಾಯಕರನ್ನೇ ಆಯ್ಕೆ ಮಾಡದ ಬಿಜೆಪಿ ಪಕ್ಷ ನಾವಿಕನಿಲ್ಲದ ದೋಣಿಯಾಗಿದ್ದು ರಾಜಕೀಯವಾಗಿ ತಮ್ಮ ಬೇಳೆ ಬೇಯಿಸಿಕೊಳ್ಳಲು ರೇಣು ಕಾಚಾರ್ಯ ಮುಂದಾಗು ತ್ತಿದ್ದಾರೆ. ಇಂಥವರಿಗೆ ಕಾಂಗ್ರೆಸ್ ಸಚಿವರು ಪ್ರಾಮುಖ್ಯತೆ ನೀಡಬಾರದು.

ಕಾಂಗ್ರೆಸ್ ಶಾಸಕರಿಗೆ ಸಚಿವರನ್ನ ಭೇಟಿ ಮಾಡಲು ಅವಕಾಶ ಸಿಗುತ್ತಿಲ್ಲ, ಕೊನೆ ಪಕ್ಷ ಸಚಿವರುಗಳಿಗೆ ಫೋನ್ ಕರೆ ಮಾಡಿದರೂ ರೆಸ್ಪಾನ್ಸ್ ಮಾಡುತ್ತಿಲ್ಲ. ಆದರೆ ವಿರೋಧ ಪಕ್ಷದ ಮಾಜಿ ಶಾಸಕರಿಗೆ ಸಚಿವರ ಭೇಟಿಗೆ ಅವಕಾಶ ಸಿಗುತ್ತಿದೆ. ಸಚಿವರನ್ನ ಭೇಟಿ ಮಾಡಿರುವ ಫೋಟೋಗಳನ್ನ ಸಾಮಾ ಜಿಕ ಜಾಲತಾಣದಲ್ಲಿ ಹಂಚಿಕೊಂಡು ಪ್ರಚಾರ ಪಡೆಯುತ್ತಿರುವುದು ಸ್ಥಳೀಯ ಕಾಂಗ್ರೆಸ್ ಕಾರ್ಯಕರ್ತರಿಗೆ ಗೊಂದಲ ಉಂಟಾಗಿದೆ. ಇಂಥವರಿಗೆ ಕಾಂಗ್ರೆಸ್ ನಾಯಕರು ಪ್ರಾಮುಖ್ಯತೆ ಕೊಡುವ ಅವಶ್ಯಕತೆ ಇಲ್ಲ ಎಂದು ತಿಳಿಸಿದರು.

ರೇಣುಕಾಚಾರ್ಯಗೆ ಹೊನ್ನಾಳಿಯಲ್ಲಿ ರಾಜಕೀಯ ಜೀವನ ನೀಡಿ, ಅಧಿಕಾರ ಕೊಟ್ಟು ಬೆಳಸಿದಂತವರು ಮಾಜಿ ಮುಖ್ಯಮಂತ್ರಿಗಳಾದ ಯಡಿಯೂರಪ್ಪ ನವರು, ಆದರೆ ಅವರು ಮುಖ್ಯಮಂತ್ರಿಯಾಗಿದ್ದ ವೇಳೆ ಜನಾರ್ಧನ್ ರೆಡ್ಡಿ ಸೇರಿದಂತೆ ಹಲವು ಶಾಸಕರೊಂದಿಗೆ ರೆಸಾರ್ಟ್ ರಾಜಕೀಯ ಮಾಡಿ ಅಧಿಕಾರದಿಂದ ಕೆಳಗಿಳಿಸಿದ್ದು ಇದೇ ರೇಣುಕಾಚಾರ್ಯ ಅವರು. ಅಧಿಕಾರಕ್ಕಾಗಿ ಏನು ಬೇಕಾದರೂ ಮಾಡುತ್ತಾರೆ.

ಇದೀಗ ಅಧಿಕಾರ ಇಲ್ಲದ ಕಾರಣ ಪ್ರಚಾರಕ್ಕಾಗಿ ಕಾಂಗ್ರೆಸ್ ಸಚಿವರ ಭೇಟಿ ಮಾಡುವ ನಾಟಕ ಶುರು ಮಾಡಿದ್ದಾರೆ. ಕಳೆದ ಬಾರಿ ಅವರದ್ದೇ ಸರ್ಕಾರವಿದ್ದರೂ ಜನರ ಸಮಸ್ಯೆ ಬಗೆಹರಿಸಲು ಸಾಧ್ಯವಾಗಿಲ್ಲ, ಹೀಗಾಗಿ ಹೊನ್ನಾಳಿ ಜನರು ತಿರಸ್ಕಾರ ಮಾಡಿದ್ದು, ಇತ್ತೀಚೆಗೆ ಗ್ಯಾರಂಟಿಗಳ ವಿರುದ್ಧ ಅಭಿಯಾನ ಮಾಡಿದಂತ ರೇಣುಕಾಚಾರ್ಯಗೆ ಕಾಂಗ್ರೆಸ್ ನಾಯಕರು ಇಂಥವರನ್ನ ಹತ್ತಿರ ಕ್ಕೂ ಬಿಟ್ಟುಕೊಳ್ಳಬಾರದು. ಲೋಕಸಭಾ ಚುನಾವಣೆ ಹತ್ತಿರವಿದ್ದು ಕಾಂಗ್ರೆಸ್ ಕಾರ್ಯಕರ್ತರಿಗೆ ಇಂಥ ವಿಚಾರ ಗೊಂದಲಕ್ಕೆ ಕಾರಣವಾಗುತ್ತಿದೆ. ಇಂಥವರಿಗೆ ಕಾಂಗ್ರೆಸ್ ಹೆಚ್ಚು ಪ್ರಾಮುಖ್ಯತೆ ನೀಡುವ ಅವಶ್ಯಕತೆ ಇಲ್ಲ ಹೇಳಿದರು.

# ಕವಾಡಿಗರ ಹಟ್ಟಿಯಲ್ಲಿ ಪಂಜಿನ ಮೆರವಣಿಗೆ



» ಚಿತ್ರದುರ್ಗ

ಚಿತ್ರದುರ್ಗ ನಗರಸಭೆ ಹಾಗೂ ಆರೋಗ್ಯ ಇಲಾಖೆ ವತಿಯಿಂದ ಇಲ್ಲಿನ ಕವಾಡಿಗರ ಹಟ್ಟಿಯಲ್ಲಿ ಕುಡಿಯುವ ನೀರು ಹಾಗೂ ಸ್ವಚ್ಛತೆ ಕುರಿತಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಸಲುವಾಗಿ ಶನಿವಾರದಂದು ಸಂಜೆ ಜಾಗೃತಿ ಜಾಥಾ ಹಾಗೂ ಪಂಜಿನ ಮೆರವಣಿಗೆ ಆಯೋಜಿಸಲಾಯಿತು. ಕಲುಷಿತ ನೀರು ಸೇವನೆ ಹಾಗೂ ಅನೈರ್ಮಲ್ಯದಿಂದಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವುದನ್ನು ತಡೆಗಟ್ಟಲು, ಸಾರ್ವಜನಿಕರಲ್ಲಿ ನೀರು ಹಾಗೂ ಸ್ವಚ್ಛ ಪರಿಸರ ಜಾಗೃತಿ ಮೂಡಿಸಲು ಆರೋಗ್ಯ ಇಲಾಖೆ ಮತ್ತು ನಗರಸಭೆ ಮುಂದಾಗಿದೆ. ಸಾರ್ವಜನಿಕರು ಕಾಯಿಸಿ, ಆರಿಸಿದ ನೀರು ಕುಡಿಯುವುದು ಹಾಗೂ ಶೌಚಾಲಯ ಬಳಸುವುದು ಹಾಗೂ ಮಲವಿಸರ್ಜನೆ ಬಳಿಕ ಕೈಗಳನ್ನು ಸಾಬೂನಿನಿಂದ ಸ್ವಚ್ಛವಾಗಿ ಕೈ ತೊಳೆದುಕೊಳ್ಳಬೇಕು, ಚರಂಡಿಗೆ ಪ್ಲಾಸ್ಟಿಕ್ ಸೇರಿದಂತೆ ಹಲವು ತ್ಯಾಜ್ಯವನ್ನು ಎಸೆಯಬಾರದು, ಚರಂಡಿಯಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳುವುದು, ಹೀಗೆ ಹಲವು ಬಗೆಯ ಆರೋಗ್ಯ ಶಿಕ್ಷಣ ನೀಡುವುದು ಇಲಾಖೆಯ ಉದ್ದೇಶವಾಗಿದ್ದು, ಸಾರ್ವಜನಿಕರ ಗಮನ ಸೆಳೆದು, ಅವರಲ್ಲಿ ಅರಿವು ಮೂಡಿಸುವ ಸಲುವಾಗಿ ಕವಾಡಿಗರ ಹಟ್ಟಿಯ ವಿವಿಧ ಬಡಾವಣೆಗಳಲ್ಲಿ ಜಾಥಾ ಹಾಗೂ ಪಂಜಿನ ಮೆರವಣಿಗೆ ಏರ್ಪಡಿಸಲಾಯಿತು. ಭದ್ರಾ ಮೇಲ್ದಂಡೆ ಯೋಜನೆ ಭೂಸ್ವಾಧೀನಾಧಿಕಾರಿ ವಿವೇಕಾನಂದ, ನಗರಸಭೆ ಪರಿಸರ ಇಂಜಿನಿಯರ್ ಜಾಫರ್, ಆರೋಗ್ಯ ನಿರೀಕ್ಷಕ ಮಂಜುನಾಥ್ ಸೇರಿದಂತೆ ಕಂದಾಯ ಇಲಾಖೆ, ಆರೋಗ್ಯ ಇಲಾಖೆ ಮತ್ತು ನಗರಸಭೆಯ ವಿವಿಧ ಅಧಿಕಾರಿ, ಸಿಬ್ಬಂದಿಗಳು ಜಾಥಾ, ಪಂಜಿನ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

### ಪ್ರತಿ ಚುನಾವಣೆಯಲ್ಲೂ ಜೆಡಿಎಸ್-ಬಿಜೆಪಿ ಮೈತ್ರಿ

ಮೈಸೂರು:ಪ್ರತಿ ಚುನಾವಣೆಯಲ್ಲೂ ಜೆಡಿಎಸ್-ಬಿಜೆಪಿ ಮೈತ್ರಿ ಮಾಡಿಕೊಳ್ಳುತ್ತಿವೆ. ಅಧಿಕೃತವಾಗಿ ಅಥವಾ ಪರೋಕ್ಷವಾಗಿ ಮೈತ್ರಿ ಮಾಡಿಕೊಂಡಿರುತ್ತಾರೆ. 2018 ಹಾಗೂ 2023ರ ಚುನಾವಣೆಯಲ್ಲಿ ಮೈತ್ರಿ ಮಾಡಿಕೊಂಡಿದ್ದರು. ಮುಂದಿನ ಚುನಾವಣೆಯಲ್ಲಿ ಮೈತ್ರಿ ಮಾಡಿಕೊಂಡರೆ ಎದುರಿಸುತ್ತೇವೆ ಎಂದು ಡಾ.ಯತೀಂದ್ರ ಸಿದ್ದರಾಮಯ್ಯ ಹೇಳಿದರು.

### ಆಶ್ರಯ ಸಮಿತಿಗೆ ಯತೀಂದ್ರ ಅಧ್ಯಕ್ಷ

ಮೈಸೂರು: ಆಶ್ರಯ ಸಮಿತಿ ಅಧ್ಯಕ್ಷರಾಗಿ ಯತೀಂದ್ರ ಸಿದ್ದರಾಮಯ್ಯ ನೇಮಕ ಮಾಡಿ 15 ದಿನಗಳ ಹಿಂದೆಯೇ ಆದೇಶ ಹೊರಡಿಸಲಾಗಿದೆ ಎಂದು ಮೈಸೂರಿನಲ್ಲಿ ಮಾಜಿ ಶಾಸಕ ಯತೀಂದ್ರ ಸಿದ್ದರಾಮಯ್ಯ ಹೇಳಿದರು. ವರುಣಾ ವಿಧಾನಸಭಾ ಕ್ಷೇತ್ರದ ಜನರ ಸಮಸ್ಯೆಯನ್ನು ಆಲಿಸುತ್ತೇನೆ ಎಂದರು.

## ಪ್ರಮುಖ ಸುದ್ದಿ

# ಮಧ್ಯವ್ಯಸನದಿಂದ ಜೀವ ಮತ್ತು ಜೀವನ ಹಾಳು: ಹೆಚ್.ಬಿಲ್ಲಪ್ಪ

» ಹೊಸದುರ್ಗ

ಮಾನವನ ಜೊತೆ ಜೊತೆಗೂ ಕೆಲ ದುಶ್ಚಟಗಳು ಬಂದಿವೆ. ಪ್ರತಿ ವರ್ಷ ಸಾವಿರಾರು ಜನರು ಮದ್ಯವ್ಯಸನಿಗಳಿಗೆ ತುತ್ತಾಗಿ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ ಇದರಿಂದ ಸಮಾಜ ಹಾಗೂ ಕುಟುಂಬಕ್ಕೆ ಅಪಾರ ನಷ್ಟವಾಗುತ್ತದೆ ಎಂದು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್ ಬಿಲ್ಲಪ್ಪ ಆತಂಕ ವ್ಯಕ್ತಪಡಿಸಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಹಾಲುರಾಮೇಶ್ವರ ಘಟಕ ಹಾಗೂ ವಿವಿಧ ಸಂಸ್ಥೆಗಳ ಸಹಯೋಗದಲ್ಲಿ




ಪಟ್ಟಣದ ಸದ್ಗುರು ಸೇವಾಶ್ರಮ ಟ್ರಸ್ಟ್ ನಲ್ಲಿ ಭಾನುವಾರ ಆಯೋಜಿಸಿದ್ದ '1715 ನೇ ಮದ್ಯವರ್ಜನ ಶಿಬಿರ' ಉದ್ಘಾಟಿಸಿ ಮಾತನಾಡಿದರು.

ಮದ್ಯಪಾನಕ್ಕೆ ತುತ್ತಾದವರ ಜೊತೆ ಇತರರು ಕೂಡ ಈ ಶಿಬಿರದಲ್ಲಿ ಪಾಲ್ಗೊಂಡು ಮಾಹಿತಿ ಪಡೆಯಬೇಕು. ಧರ್ಮಸ್ಥಳ ಸಂಸ್ಥೆಯು ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಆಯೋಜಿಸಿರುವ ಈ ಶಿಬಿರಕ್ಕಾಗಿ ನಾವು ಅಬಾರಿಯಾಗಿರಬೇಕು. ಮಧ್ಯವ್ಯಸನಗಳಿಂದ ಹೊರಬಂದು ಕತ್ತಲೆಯಿಂದ ಬೆಳಕಿನೆಡೆಗೆ ಜೀವನ ಕಂಡುಕೊಳ್ಳಿ ಎಂದರು.

ಕೋವಿಡ್ ಸಂದರ್ಭದಲ್ಲಿ ಎಲ್ಲಾ ಅಂಗಡಿ ಮುಚ್ಚಿದ್ದರೂ, ಮಧ್ಯದ ಅಂಗಡಿ ಮಾತ್ರ ತೆರೆದೆ ಇದ್ದವು. ಕುಡಿಯುವವರು ಸರ್ಕಾರ ನಡೆಯುತ್ತಿರುವುದು ನಮ್ಮಿಂದ ಎನ್ನುವ ಮಟ್ಟಕ್ಕೆ ನಮ್ಮ ಸರ್ಕಾರಗಳ ಬಗ್ಗೆ ಚಿಂತನೆ ಕೀಳುಮಟ್ಟಕ್ಕಿರುವುದು ನಮ್ಮ ದುರಂತ ಎಂದು ಕಳವಳ ವ್ಯಕ್ತಪಡಿಸಿದರು.

ಮದ್ಯವರ್ಜನ ಶಿಬಿರದ ಗೌರವಾಧ್ಯಕ್ಷ ಆಗ್ರೋ ಶಿವಣ್ಣ ಮಾತನಾಡಿ, ಮಧ್ಯ ಸೇವನೆಯಿಂದ ವ್ಯಕ್ತಿಯ ಜೀವ ಮತ್ತು ಜೀವನ ಹಾಳಾಗುತ್ತದೆ. ಹೆಂಡತಿ ಮತ್ತು ಮಕ್ಕಳು ನಿತ್ಯವೂ ಸಂಕಟವನ್ನು ಪಡುವಂತಹವ್ಯವಸ್ಥೆನಿರ್ಮಾಣವಾಗುತ್ತದೆ. ಸಂಸಾರ ಸುಖಕರವಾಗಿರಬೇಕಾದರೆ, ಮಧ್ಯ ಸೇವನೆಯಿಂದ ದೂರವಿರುವುದು ಒಳ್ಳೆಯದು ಎಂದು ತಿಳಿಸಿದರು. ಈ ವೇಳೆ ಮಧ್ಯವರ್ಜನ ಶಿಬಿರದ ಅಧ್ಯಕ್ಷ ಇ.ವಿ.ಅಜ್ಜಪ್ಪ, ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಬಿ.ಪಿ. ಓಂಕಾರಪ್ಪ ಪಾಲ್ಗೊಂಡಿದ್ದರು.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T